ಯುವ ಸ್ಫೂರ್ತಿ



ಶಕ್ತಿಯಲ್ಲ ನಿಮ್ಮೊಳಗೇ ಇದೆ, ನೀವು ಏನು ಬೇಕಾದರೂ ಮಾಡಬಲ್ಲಿರಿ ಎಲ್ಲವನ್ನೂ ಮಾಡಬಲ್ಲಿರಿ.
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 204 | ಬುಧುವಾರ : 28–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 204 | WEDNESDAY : 28–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಡ್ರಗ್ಸ್ ಬಳಕೆ ತಡೆಗಟ್ಟಲು ಪ್ರತಿಯೊಬ್ಬರ ಸಹಕಾರ ಅಗತ್ಯ: ಜಿಲ್ಲಾಧಿಕಾರಿ ನಿತೀಶ್.ಕೆ

ಯುವ ಮಾರ್ಗ ಸುದ್ದಿ

**ರಾಯಚೂರು.ಮೇ.28–**ಯುವಜನತೆಗೆ ಡ್ರಗ್ಸನಿಂದ ಉಂಟಾಗುವ ಹಾನಿಗಳ ಕುರಿತು ಅರಿವು ಮೂಡಿಸಲು ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ ಮತ್ತು ನವೋದಯ ಮೆಡಿಕಲ್ ಕಾಲೇಜ್ ಸಹಯೋಗದಲ್ಲಿ ಮಂಗಳವಾರ ಡ್ರಗ್ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.


ನಗರದ ನವೋದಯ ಮೆಡಿಕಲ್ ಕಾಲೇಜಿನ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್.ಕೆ ಅವರು ಮಾತನಾಡಿ, ನಮ್ಮ ಸಮಾಜದ ರಕ್ಷಣೆಗೆ 2ನೇ ಪುಟಕ್ಕೆ



## ರಾಜ್ಯದಲ್ಲಿ 37 ಹೊಸ ಕೊರೊನಾ ಪತ್ತೆ

**ಬೆಂಗಳೂರು, ಮೇ.28–**ಕಳೆದ 24 ಗಂಟೆಗಳಲ್ಲಿ ರಾಜ್ಯದಲ್ಲಿ 37 ಹೊಸ ಕೊರೊನಾ ಪ್ರಕರಣಗಳು ದಾಖಲಾಗಿದ್ದು, ಒಟ್ಟು ಸಕ್ರಿಯ ಕೇಸ್‌ಗಳ ಸಂಖ್ಯೆ 80ಕ್ಕೆ ಏರಿಕೆಯಾಗಿದೆ. ಇದರ ನಡುವೆ ಮಾಸ್ಕ್ ಧರಿಸುವುದು ಒಳ್ಳೆಯದೆಂದು ಸರ್ಕಾರ ಸಲಹೆ ನೀಡಿದೆ.

ಬೆಂಗಳೂರಿನಲ್ಲಿ ಒಟ್ಟು 183 ಜನರಿಗೆ ಕೊರೊನಾ ಟೆಸ್ಟ್ ಮಾಡಲಾಗಿದ್ದು, 73 ಮಂದಿಗೆ ಸೋಂಕು ದೃಢಪಟ್ಟಿದೆ. ಇದರಿಂದಾಗಿ ಬೆಂಗಳೂರಿನಲ್ಲಿ ಪಾಸಿಟಿ




ವಿಟಿ ದರ ಶೇಕಡ 19.37ಕ್ಕೆ ಏರಿಕೆಯಾಗಿದೆ.

ಅದೇ ರೀತಿ, ಬೆಂಗಳೂರು ಗ್ರಾಮಾಂತರದಲ್ಲಿ ಇಬ್ಬರಿಗೆ ಸೋಂಕು ದೃಢಪಟ್ಟಿದೆ. ಇದಲ್ಲದೆ, ದಕ್ಷಿಣ ಕನ್ನಡ, ಮೈಸೂರು, ಮತ್ತು ವಿಜಯನಗರ ಜಿಲ್ಲೆಗಳಲ್ಲೂ ಕೊರೊನಾ ಕೇಸ್‌ಗಳು ವರದಿಯಾಗಿವೆ. ದಕ್ಷಿಣ ಕನ್ನಡದಲ್ಲಿ ಒಂದು, ಮೈಸೂರಿನಲ್ಲಿ ಮೂರು, ಮತ್ತು ವಿಜಯನಗರದಲ್ಲಿ ಒಂದು ಪಾಸಿಟಿವ್ ಕೇಸ್ ದಾಖಲಾಗಿದೆ.

**ಸರ್ಕಾರದ ಕಟ್ಟುನಿಟ್ಟಿನ ಕ್ರಮಗಳು**

ಕೊರೊನಾದ ಹೊಸ ರೂಪಾಂತರದಿಂದ ಉಂಟಾದ ಆತಂಕವನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಸರ್ಕಾರ, ಆರೋಗ್ಯ ಇಲಾಖೆಗೆ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

ಮುಖ್ಯಮಂತ್ರಿ 2ನೇ ಪುಟಕ್ಕೆ

### ಉಟಕನೂರು–ದೋತರಬಂಡಿ ಸೇತುವೆ ಕುಸಿತ

## ಬೈಕ್ ಸವಾರರು ಅದೃಷ್ಟವಶಾತ್ ಪಾರು

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.28–**ತಾಲೂಕಿನ ದೋತರಬಂಡಿ ಮತ್ತು ಉಟಕನೂರು ಗ್ರಾಮಗಳನ್ನು ಸಂಪರ್ಕಿಸುವ ಸೇತುವೆಯು ಸೋಮವಾರ ಸುರಿದ ಭಾರಿ ಮಳೆಯಿಂದಾಗಿ ಸಂಪೂರ್ಣ ಜಲಾವೃತಗೊಂಡು ಮಧ್ಯದಲ್ಲಿ ದೊಡ್ಡ ಬಿರುಕುಗಳು ಕಾಣಿಸಿಕೊಂಡಿವೆ. ಮಂಗಳವಾರ ಅಮಾವಾಸ್ಯೆಯ ಪ್ರಯುಕ್ತ ಶ್ರೀಮರಿಬಸವಲಿಂಗ ಕ್ಷೇತ್ರವಾದ ಉಟಕನೂರಿಗೆ ಸಾವಿರಾರು ಭಕ್ತರು ಆಗಮಿಸುವ ಸಂದರ್ಭದಲ್ಲಿ, ಎರಡು ಬೈಕ್‌ಗಳಲ್ಲಿ ಬಂದ ನಾಲ್ವರು ಸವಾರರು ಸೇತುವೆಯ ಕೆಳಗೆ ಬಿದ್ದರೂ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.





ದೋತರಬಂಡಿ–ಉಟಕನೂರು ಸೇತುವೆಯು ಉಟಕನೂರು, ಬೆಳವಾಟ್ ಮತ್ತು ಪೋತ್ನಾಳ್ ಭಾಗಗಳಿಂದ ಮಸ್ಕಿ ಮತ್ತು ಬಳಗನೂರಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಕೊಂಡಿಯಾಗಿದೆ. ಸೋಮವಾರ ಸುರಿದ ಧಾರಾಕಾರ ಮಳೆಯಿಂದಾಗಿ ಸೇತುವೆಯು ನೀರಿನಿಂದ ಸಂಪೂರ್ಣ ಆವೃತವಾಗಿತ್ತು. ಅಲ್ಲದೆ, ಸೇತುವೆಯ ಮಧ್ಯ ಭಾಗದಲ್ಲಿ ದೊಡ್ಡ ಕಂದಕಗಳು ಉಂಟಾಗಿದ್ದವು. ಮಂಗಳವಾರ ಅಮಾವಾಸ್ಯೆಯ ಪ್ರಯುಕ್ತ ಮರಿಬಸವಲಿಂಗ ದೇವಸ್ಥಾನಕ್ಕೆ ಭಕ್ತರ ದಂಡೇ ಹರಿದು ಬರುತ್ತಿತ್ತು. ಇದೇ ಸಂದರ್ಭದಲ್ಲಿ, ಎರಡು ಬೈಕ್‌ಗಳಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಸವಾರರು ಸೇತುವೆ ದಾಟುವಾಗ ಆಕಸ್ಮಿಕವಾಗಿ ಹಳ್ಳದ ಕೆಳಗೆ ಬಿದ್ದಿದ್ದಾರೆ. ಸ್ಥಳೀಯರ ಸಮಯಪ್ರಜ್ಞೆಯಿಂದಾಗಿ ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

**ಸಾರ್ವಜನಿಕರ ಆಕ್ರೋಶ**

**ಈ ಸೇತುವೆಯ ದುರಸ್ತಿಗೆ ಈಗಾಗಲೇ ಟೆಂಡರ್ ಆಗಿದ್ದರೂ, ಕಾಮಗಾರಿ ಇನ್ನೂ ಆರಂಭವಾಗಿಲ್ಲ. "ಇನ್ನೆಷ್ಟು ಜೀವಗಳು ಬಲಿಯಾಗಬೇಕೋ?" ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಸೇತುವೆ ದುರಸ್ತಿ ಕಾಮಗಾರಿ ಆರಂಭಿಸುವಂತೆ ಸ್ಥಳೀಯರು ಒತ್ತಾಯಿಸಿದ್ದಾರೆ. ಇಂತಹ ಘಟನೆಗಳು ಮರುಕಳಿಸುವುದನ್ನು ತಪ್ಪಿಸಲು ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕಿದೆ.**

## ವಿದ್ಯುತ್ ಚಾಲಿತ ಬಸ್ ಒದಗಿಸಲು ಬಿಎಸ್‌ಪಿಯಿಂದ ಸಚಿವ ಎಚ್‌ಡಿಕೆಗೆ ಮನವಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.28–** ಕರ್ನಾಟಕ ರಾಜ್ಯದಲ್ಲಿ ಅತೀ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿರುವ ಈಶಾನ್ಯ ಸಾರಿಗೆ ಸಂಸ್ಥೆಗೆ ಕೇಂದ್ರ ಸರಕಾರದ ಮಹಾತಾಂಕ್ಷಿ ಯೋಜನೆ ಪಿ.ಎಂ–ಇ–ಡ್ರೈವ್ ಯೋಜನೆಯಡಿಯಲ್ಲಿ ವಿದ್ಯುತ್ ಚಾಲಿತ ಬಸ್‌ಗಳನ್ನು ಒದಗಿಸುವಂತೆ ಕೋರಿ ತಹಶೀಲ್ದಾರ್ ಮೂಲಕ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿಗೆ ಬಹುಜನ ಸಮಾಜ ಪಕ್ಷ ಮನವಿ ಸಲ್ಲಿಸಿತು.

ಪಟ್ಟಣದ ತಹಸೀಲ್ದಾರ



ಮೂಲಕ ಮನವಿ ಪತ್ರದ ಸಲ್ಲಿಸಿ ನಂತರ ಬಹುಜನ ಸಮಾಜ ಪಕ್ಷದ ರಾಜ್ಯ ಕಾರ್ಯದರ್ಶಿಯಾದ ಶಾಮಸುಂದರ ಕುಂಬದಾಳ ಮಾತನಾಡಿ ಅವರು ಕೇಂದ್ರ ಸರಕಾರದ ಮಹಾತಾಂಕ್ಷಿ ಯೋಜನೆ ಪಿ.ಎಂ–ಇ–ಡ್ರೈವ್ ಯೋಜನೆಯಲ್ಲಿ ದೇಶದಲ್ಲಿ ಎಲೆಕ್ಟಿಕಲ್ ಬಸ್‌ಗಳನ್ನು ಹಂಚಿಕೆ ಮಾಡಲು ನಿರ್ಧರಿಸಿದ್ದು, ಈ ಸಭೆಯು ಬೃಹತ್ ಕೈಗಾರಿಕಾ ಸಚಿವಾಲಯದಲ್ಲಿ ಜರುಗಿದ್ದು, ಈ ಸಭೆಯಲ್ಲಿ ಕರ್ನಾಟಕ ಸೇರಿದಂತೆ, ವಿವಿಧ ರಾಜ್ಯಗಳ ಅಧಿಕಾರಿಗಳು ಭಾಗವಹಿಸಿದ್ದರು ಕರ್ನಾಟಕದ ಪರವಾಗಿ ಸಾರಿಗೆ ಇಲಾಖೆಯ ಕಾರ್ಯದರ್ಶಿಗಳು ಭಾಗವಹಿಸಿ 7,000 ಎಲೆಕ್ಟ್ರಿಕ್ ಬಸ್ಗಳನ್ನು ನೀಡುವಂತೆ ಮನವಿ ಮಾಡಿದ್ದಾರೆ, ಇದಲ್ಲದೇ ಸಾರಿಗೆ ಸಚಿವ ರಾಮಲಿಂಗರೆಡ್ಡಿಯವರು ಕೂಡ ಇದೇ ರೀತಿಯ ಬೇಡಿಯನ್ನು ಸಲ್ಲಿಸಿದ್ದಾರೆ ಮೊದಲ ಹಂತದಲ್ಲಿಯೇ ಬಿ.ಎಂ.ಟಿ.ಸಿ.ಗೆ 4,500 ಒದಗಿಸಲಾಗುವುದು ಎಂದು ಕುಮಾರಸ್ವಾಮಿಯವರೆ ಹೇಳಿಕೆ ನೀಡಿದ್ದಾರೆ.

ಈಗಾಗಲೇ ಈಶಾನ್ಯ ಕರ್ನಾಟಕ ಸಾರಿಗೆ 2ನೇ ಪುಟಕ್ಕೆ

## ಜಿಲ್ಲಾ ಆಸ್ಪತ್ರೆ ರದ್ದುಗೊಳಿಸದಿದ್ದರೆ ಜನಪ್ರತಿನಿಧಿಗಳ ಮನೆ ಮುಂದೆ ಪ್ರತಿಭಟನೆ : ಚಂದ್ರಶೇಖರ್ ನಾಯಕ್

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.28–** ಗುಲ್ಬರ್ಗದಲ್ಲಿ ನಡೆದ ಬಜೆಟ್ ಅಧಿವೇಶನದಲ್ಲಿ ಲಿಂಗಸ್ಗೂರು ತಾಲೂಕಿಗೆ ಮಂಜೂರು ಮಾಡಲಾಗಿದ್ದ 200 ಹಾಸಿಗೆಗಳ ಜಿಲ್ಲಾಸ್ಪತ್ರೆಯನ್ನು ಸಿಂಧನೂರಿಗೆ ವರ್ಗಾವಣೆ ಮಾಡಲಾಗಿದ್ದು ಎಂಟು ದಿನಗಳ ಒಳಗಾಗಿ ಜಿಲ್ಲಾಸ್ಪತ್ರೆಯ ವರ್ಗಾವಣೆ ಆದೇಶ ಹಿಂಪಡೆಯದಿದ್ದರೆ ಲಿಂಗಸುಗೂರು ಕ್ಷೇತ್ರದ ಶಾಸಕ ಮಾನಪ್ಪ ವಜ್ಜಲ್ ವಿಧಾನ ಪರಿಷತ್ ಸದಸ್ಯ ಶರಣಗೌಡ ಬಯ್ಯಾಪೂರ ಹಾಗೂ ಮಾಜಿ ಶಾಸಕ ಡಿ.ಎಸ್.ಹೂಲಗೇರಿ ಯವರ




ಮನೆ ಮುಂದೆ ಪ್ರತಿಭಟನೆ ಮಾಡಲಾಗುವುದೆಂದು ಕರುನಾಡ ವಿಜಯ ಸೇನೆ ಜಿಲ್ಲಾಧ್ಯಕ್ಷ ಚಂದ್ರಶೇಖರ್ ನಾಯಕ್ ಎಚ್ಚರಿಕೆ ನೀಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದವರು ಲಿಂಗಸ್ಗೂರು ಕ್ಷೇತ್ರ ಮೀಸಲು ಕ್ಷೇತ್ರವಾಗಿದ್ದು ಇಲ್ಲಿ ಸುಮಾರು ಮೂರರಿಂದ ನಾಲ್ಕು ಲಕ್ಷ ಜನಸಂಖ್ಯೆ ಹೊಂದಿದ್ದು ಮೀಸಲು ಕ್ಷೇತ್ರವನ್ನು ಅಭಿವೃದ್ಧಿಮಾಡಬೇಕಾದ ಹಾಗೂ 2ನೇ ಪುಟಕ್ಕೆ

## ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಆರ್‌ಎಸ್‌ನಿಂದ ಇಲಾಖೆಗಳ ವಿರುದ್ಧ ಪ್ರತಿಭಟನೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.28–** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಆರ್‌ಎಸ್ ಪಕ್ಷದ ವತಿಯಿಂದ ಪಟ್ಟಣದ ಶಾಸಕರ ಭವನದ ಮುಂದೆ ಧರಣಿ ನಡೆಸಲಾಯಿತು. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಮಾರುಕಟ್ಟೆ ಪ್ರಾಂಗಣದಲ್ಲಿ ನಿವೇಶನ ಹಂಚಿಕೆ ಪಡೆದ ಮಾಲೀಕರು ಅನುಮೋದಿತ ನಕ್ಷೆಗೆ ವಿರುದ್ಧವಾಗಿ ಕಟ್ಟಡಗಳನ್ನು ನಿರ್ಮಿಸಿದ್ದಾರೆ. ಅವುಗಳನ್ನು ವಸತಿ ನಿವೇಶನಗಳಿಗೆ ಬಳಸುತ್ತಿದ್ದು, ಕೃಷಿ ಉತ್ಪನ್ನಗಳಲ್ಲದೆ ಬೇರೆ ವ್ಯಾಪಾರಗಳಿಗೆ ಮಾರುಕಟ್ಟೆಯನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಕಾರ್ಯದರ್ಶಿಗಳು, ಉಪ–ನಿರ್ದೇಶಕರು ಮತ್ತು ನಿರ್ದೇಶಕರಿಗೆ ದೂರು ಸಲ್ಲಿಸಲಾಗಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಪುರಸಭೆಗೆ ಸೇರಿದ 1–08 ಗುಂಟೆ ಜಾಗವನ್ನು ಅತಿಕ್ರಮಿಸಿಕೊಂಡು ಮತ್ತು ಆದಾಯಕ್ಕೆ ನಷ್ಟ ಉಂಟು ಮಾಡುತ್ತಿರುವ ಜಾಫರ್ ಹುಸೇನ್ ಅವರನ್ನು ಅಮಾನತುಗೊಳಿಸುವಂತೆ ಮುಖ್ಯಾಧಿಕಾರಿಗೆ ದೂರು ನೀಡಲಾಗಿದೆ. ಅಲ್ಲದೆ, ಸುಮಾರು 60ಕ್ಕೂ ಹೆಚ್ಚು 2ನೇ ಪುಟಕ್ಕೆ

## ವೃದ್ಧರಿಗೆ ಮಾಸ್ಕ್ ಕಡ್ಡಾಯ: ಸಿಎಂ

**ಬೆಂಗಳೂರು, ಮೇ.28–** ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ವೃದ್ಧರು, ಕಾಯಿಲೆಯಿರುವವರು ಮಾಸ್ಕ್ ಕಡ್ಡಾಯವಾಗಿ ಹಾಕಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮ ಹೇಳಿದರು.

ಅವರು ವಿಧಾನಸೌಧದ ಪೂರ್ವ ದ್ವಾರದ ಬಳಿ ಇರುವ ಮಾಜಿ ಪ್ರಧಾನ ಮಂತ್ರಿ ದಿವಂಗತ ಪಂಡಿತ್ ಜವಾಹರಲಾಲ್ ನೆಹರು ರವರ ಪುಣ್ಯತಿಥಿಯ ಅಂಗವಾಗಿ ಅವರ ಪ್ರತಿಮೆ ಹಾಗೂ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ನಂತರ



ಮಾಧ್ಯಮ ದವರೊಂದಿಗೆ ಮಾತನಾಡಿದರು.

ಕೋವಿಡ್ ಸಂಬಂಧಿಸಿದಂತೆ ನಿನ್ನೆ ನಡೆದ ಸಭೆಯಲ್ಲಿ ಮುನ್ನೆಚ್ಚರಿಕಾ ಬಗ್ಗೆ ಚರ್ಚಿಸಲಾಗಿದೆ. ನಾವು ಎಲ್ಲದ್ದಕ್ಕೂ ಸಿದ್ಧರಾಗಿರಬೇಕು. ವೆಂಟಿಲೇಟರ್, ಆಮ್ಲಜನಕ, ವಾರ್ಡ್ ಗಳಿಗೆ ತೊಂದರೆಯಾಗದಂತೆ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಲಾಗಿದೆ ಎಂದರು. ಸುಮಾರು 65 ರಷ್ಟಿದ್ದ ಪ್ರಕರಣಗಳು ಕೋವಿಡ್ ಪ್ರಕರಣಗಳು 80 ಕ್ಕೆ ಏರಿಕೆಯಾಗಿವೆ. 2ನೇ ಪುಟಕ್ಕೆ

## ಸೋಮಶೇಖರ್, ಹೆಬ್ಬಾರ್ ಉಚ್ಛಾಟನೆ



**ಬೆಂಗಳೂರು, ಮೇ.28––** ಪಕ್ಷ ವಿರೋಧಿ ಚಟುವಟಿಕೆ ನಡೆಸಿದ ಆರೋಪದ ಮೇಲೆ ಯಲ್ಲಾಪುರದ ಶಾಸಕರಾದ ಶಿವರಾಮ್ ಹೆಬ್ಬಾರ್ ಹಾಗೂ ಬೆಂಗಳೂರಿನ ಯಶವಂತಪುರ ವಿಧಾನಸಭಾ ಕ್ಷೇತ್ರ ಶಾಸಕ ಎಸ್.ಟಿ. ಸೋಮಶೇಖರ್ ಅವರನ್ನು 6 ವರ್ಷಗಳ ಕಾಲ ಬಿಜೆಪಿಯಿಂದ ಉಚ್ಚಾಟಿಸಿದೆ.

ಬಿಜೆಪಿಯಲ್ಲೇ ಇದ್ದುಕೊಂಡು ಕಾಂಗ್ರೆಸ್ ಜೊತೆ ಈ ಇಬ್ಬರು ಶಾಸಕರು ಗುರುತಿಸಿಕೊಂಡಿದ್ದರು. ಹೀಗಾಗಿ ಈ ಇಬ್ಬರನ್ನು ಉಚ್ಛಾಟಿಸಿದೆ ಎಂದು ಕೇಂದ್ರ ಶಿಸ್ತು ಸಮಿತಿ ಸದಸ್ಯ ಕಾರ್ಯದರ್ಶಿ ಓಂ ಪಾಠಕ್ ಬಿಡುಗಡೆ ಮಾಡಿರುವ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಮೊದಲನೇಯ ಪುಟದಿಂದ

# ಡ್ರಗ್ಸ್ ಬಳಕೆ ತಡೆಗಟ್ಟಲು ಪ್ರತಿಯೊಬ್ಬರ ಸಹಕಾರ ಅಗತ್ಯ: ಜಿಲ್ಲಾಧಿಕಾರಿ ನಿತೀಶ್.ಕೆ

ಇಂಥ ಜಾಗೃತಿ ಅವಶ್ಯಕವಾಗಿದೆ. ಯುವಜನತೆ ಸಮಾಜದ ಶಕ್ತಿಯಾಗಿದೆ. ಡ್ರಗ್ಸ್ ಬಳಕೆಯಿಂದಾಗಿ ಅವರ ಉಜ್ವಲ ಭವಿಷ್ಯ ಧ್ವಂಸವಾಗುತ್ತಿದೆ. ಇದನ್ನು ತಡೆಗಟ್ಟಲು ಪ್ರತಿಯೊಬ್ಬರು ಸಹಕಾರ ನೀಡಬೇಕು. ಡ್ರಗ್ಸ್ ಸೇವನೆ ಆರೋಗ್ಯಕ್ಕೆ ಮಾತ್ರವಲ್ಲ, ಮಾನಸಿಕವಾಗಿ ಕೂಡಾ ವ್ಯಕ್ತಿಯನ್ನು ತೀವ್ರವಾಗಿ ದುರ್ಬಲಗೊಳಿಸುತ್ತದೆ. ಅಲ್ಲದೆ ಮಕ್ಕಳನ್ನು ಸೂಕ್ತ ಮಾರ್ಗದಲ್ಲಿ ಬೆಳೆಸುವ ಜವಾಬ್ದಾರಿ ಪೋಷಕರ ಮೇಲಿದೆ ಎಂದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, ಸಮಾಜಕ್ಕೆ ಮಾರಕವಾಗಿರುವ ಡ್ರಗ್ಸ್, ಗಾಂಜಾ, ಅಫೀಮ್ ಸೇವನೆಯಿಂದ ವ್ಯಕ್ತಿಯ ಆರೋಗ್ಯ ಹಾಳಾಗುತ್ತದೆ. ಆರೋಗ್ಯ ಹಾಳಾದರೆ ಸಮಾಜವು ಹಾಳಾಗುತ್ತದೆ. ಸಮಾಜವು ಹಾಳಾಗಲು ಅವಕಾಶ ನೀಡದೆ ಜಿಲ್ಲೆಯ ಪ್ರತಿಯೊಬ್ಬರ ಸಹಕಾರದೊಂದಿಗೆ ಡ್ರಗ್ಸ್ ಮುಕ್ತ ಜಿಲ್ಲೆಯಾಗಿಸಲು ಶ್ರಮಿಸಬೇಕೆಂದು ಹೇಳಿದರು.

ಡ್ರಗ್ಸ್ ವಿರುದ್ಧ ಸೋಮವಾರ 9 ಪ್ರಕರಣ ದಾಖಲಾಗಿದ್ದು, ಅಕ್ರಮ ಚಟುವಟಿಕೆಗಳ ಕುರಿತು ಪೊಲೀಸ್ ಇಲಾಖೆಯಿಂದ ನಿರಂತರ ದಾಳಿ ನಡೆಸಲಾಗುತ್ತದೆ. ಮಾದಕ ವಸ್ತುಗಳ ಸಾಗಣೆ ಕುರಿತು ಮಾಹಿತಿ ದೊರಕಿದ್ದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದರು.

ಡ್ರಗ್ಸ್ ಮುಕ್ತ ಮಾಡಲು ಪಂಚಾಯತ್ ಮಟ್ಟ, ಪಟ್ಟಣ ಪಂಚಾಯಿತಿ ನಗರಸಭೆ ಮುಂತಾದ ಹಂತಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಈಗಾಗಲೇ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಸಾರ್ವಜನಿಕರು ವಾಹನವನ್ನು ನಿಧಾನವಾಗಿ ಚಾಲನೆ ಮಾಡಬೇಕು. ರಸ್ತೆ ನಿಯಮಗಳನ್ನು ಪಾಲನೆ ಮಾಡಬೇಕು ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ಡ್ರಗ್ ನಿಯಂತ್ರಣಾಧಿಕಾರಿ ಉದಯ ಕಿಶೋರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ನವೋದಯ ರಿಜಿಸ್ಟ್ರಾರ್ ಡಾ.ಟಿ. ಶ್ರೀನಿವಾಸ್, ನವೋದಯ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಬಿ.ದೇವನಂದ ಸೇರಿದಂತೆ ಪೊಲೀಸ್ ಇಲಾಖೆಯ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ನವೋದಯ ಮೆಡಿಕಲ್ ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು ಹಾಗೂ ವಿದ್ಯಾರ್ಥಿಗಳು ಇದ್ದರು.

# ವಿದ್ಯುತ್ ಚಾಲಿತ ಬಸ್ ಒದಗಿಸಲು ಬಿಎಸ್‌ಪಿಯಿಂದ ಮನವಿ

ಸಂಸ್ಥೆಯಲ್ಲಿ ಸುಸಜ್ಜಿತ ಬಸ್ ಗಳಿದ್ದು ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಾರಿಗೆಗೆ ಹೆಚ್ಚಿನ ಒತ್ತು ಕೊಡಬೇಕಾಗಿರುವುದು ಮೊದಲ ಹಂತದಲ್ಲಿ ವಿತರಣೆಯಾಗುವ ಎಲೆಕ್ಟ್ರಿಕಲ್ ಬಸ್‌ಗಳಲ್ಲಿ ಈಶಾನ್ಯ ಕರ್ನಾಟಕ ಸಂಸ್ಥೆಗೆ ನೀಡಬೇಕು ಎಲೆಕ್ಟ್ರಿಕಲ್ ಬಸ್ ಗಳ ಹಂಚಿಕೆಗೆ ಮುನ್ನ ಹೊಸ ಡಿಪೋಗಳನ್ನು ಸ್ಥಾಪಿಸುವ ಬಗ್ಗೆ ಡಿಪೋಗಳನ್ನು ಮೇಲ್ದರ್ಜೆಗೇರಿಸುವುದು ಹಾಗೂ ಅಗತ್ಯಬಿದ್ದರೆ ಹೊಸ ಡಿಪೋಗಳ ಸ್ಥಾಪನೆ ಸೇರಿದಂತೆ ಮಾಲಿನ್ಯರಹಿತ ಸಮೂಹ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸುವುದು

ಸಾರಿಗೆ ಸಂಸ್ಥೆಯಲ್ಲಿ ಸುಸಜ್ಜಿತ ಬಸ್ ಗಳಿದ್ದು ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಾರಿಗೆಗೆ ಹೆಚ್ಚಿನ ಒತ್ತು ಕೊಡಬೇಕಾಗಿರುವುದು ಮೊದಲ ಹಂತದಲ್ಲಿ ವಿತರಣೆಯಾಗುವ ಎಲೆಕ್ಟ್ರಿಕಲ್ ಬಸ್‌ಗಳಲ್ಲಿ ಈಶಾನ್ಯ ಕರ್ನಾಟಕ ಸಂಸ್ಥೆಗೆ ನೀಡಬೇಕು ಎಲೆಕ್ಟ್ರಿಕಲ್ ಬಸ್ ಗಳ ಹಂಚಿಕೆಗೆ ಮುನ್ನ ಹೊಸ ಡಿಪೋಗಳನ್ನು ಸ್ಥಾಪಿಸುವ ಬಗ್ಗೆ ಡಿಪೋಗಳನ್ನು ಮೇಲ್ದರ್ಜೆಗೇರಿಸುವುದು ಹಾಗೂ ಅಗತ್ಯಬಿದ್ದರೆ ಹೊಸ ಡಿಪೋಗಳ ಸ್ಥಾಪನೆ ಸೇರಿದಂತೆ ಮಾಲಿನ್ಯರಹಿತ ಸಮೂಹ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸುವುದು, ರಾಷ್ಟ್ರೀಯ ಅಗತ್ಯ ಎಂಬುದಾಗಿ ಯೋಜನೆಯ ಉದ್ದೇಶವಾಗಿರುವುದು ಬಸ್ ಹಂಚಿಕೆಯಲ್ಲಿ ಬೇಡಿಕೆ ಜನಸಂಖ್ಯೆ ಹಾಗೂ ಹಳೆಯ ಬಸ್ ವಿಲೇವಾರಿ ಅಂಶಗಳನ್ನು ಪರಿಗಣಿಸಲಾಗಿದೆ, ಆದ್ದರಿಂದ ಕಲ್ಯಾಣ ಕರ್ನಾಟಕ ಪ್ರಮುಖ ನಗರಗಳ ಒಳಗೊಂಡಂತೆ ಸಾರಿಗೆ ವ್ಯವಸ್ಥೆ ಸುಧಾರಿಸಲು ಸುಗಮ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗಲು ಎಲೆಕ್ಟ್ರಿಕಲ್ ಬಸ್ ಗಳನ್ನು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಒದಗಿಸಬೇಕು ಹಾಗೂ ಕಲ್ಯಾಣ ಕರ್ನಾಟಕದಲ್ಲಿರುವ ಈಶಾನ್ಯ ಸಾರಿಗೆ ಸಂಸ್ಥೆಯು ಬಸ್ ಗಳ ನಿರ್ವಹಣೆ ಮತ್ತು ಬಳಕೆಯಲ್ಲಿ ಉತ್ತಮವಾಗಿರುತ್ತದೆ ಈಗಾಗಲೇ ಜನರ ಸುಗಮ ಸಂಚಾರಕ್ಕೆ ಬಸ್ ಗಳ ಅವಶ್ಯಕತೆ ಇರುತ್ತದೆ ಪ್ರಾಯೋಗಿಕವಾಗಿ ಬಸ್ ಓಡಾಡಲು ಕ್ರಮ ಜರುಗಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಬಿಎಸ್ಪಿ ಮಾನ್ವಿ ವಿಧಾನಸಭಾ ಉಸ್ತುವಾರಿ ಚಂದ್ರಶೇಖರ.ಬಿ, ವೆಂಕಟೇಶ್ ನಂದಿಹಾಳ, ವಿರುಪನಗೌಡ ಜಟ್ಟಿ ಇತರರು ಇದ್ದರು

# ಜನಪ್ರತಿನಿಧಿಗಳ ಮನೆ ಮುಂದೆ ಪ್ರತಿಭಟನೆ : ಚಂದ್ರಶೇಖರ್ ನಾಯಕ್

ಅಹಿಂದ ವರ್ಗದ ಪರವೆಂದು ಹೇಳಿಕೊಳ್ಳುತ್ತಿರುವ ಮುಖ್ಯಮಂತ್ರಿಗಳು ಜಿಲ್ಲಾಸ್ಪತ್ರೆಯನ್ನು ಸಿಂಧನೂರಿಗೆ ವರ್ಗಾವಣೆಗೊಳಿಸಿ ಮೀಸಲು ಕ್ಷೇತ್ರಕ್ಕೆ ಅನ್ಯಾಯ ಮಾಡಿದ್ದಾರೆ.

ವಿಧಾನಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯಾಪುರ್, ಲಿಂಗಸಗೂರ ಶಾಸಕ ಮಾನಪ್ಪ ವಜ್ಜಲ್, ಮಾಜಿ ಶಾಸಕ ಡಿ ಎಸ್ ಹೂಲಗೇರಿ ಅವರ ರಾಜಕೀಯ ಇಚ್ಛಾಶಕ್ತಿ ಕೊರತೆಯಿಂದಾಗಿ ಹಾಗೂ ಇವರ ನಿರ್ಲಕ್ಷದಿಂದಾಗಿ ಲಿಂಗಸ್ಗೂರು ಕ್ಷೇತ್ರಕ್ಕೆ ಇಲ್ಲಿಯ ಬಡ ಜನತೆಗೆ ಸೌಲಭ್ಯ ಸಿಗಬೇಕಾಗಿದ್ದ 200 ಹಾಸಿಗೆಗಳ ಆಸ್ಪತ್ರೆ ಸಿಂಧನೂರಿಗೆ ವರ್ಗಾವಣೆಯಾಗಿದೆ.

ಮೀಸಲು ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಬೇಕಾಗಿದ್ದ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣು ಪ್ರಕಾಶ್ ಪಾಟೀಲ್ ಅವರು ಸಿಂಧನೂರು ಕ್ಷೇತ್ರದ ಶಾಸಕ ಹಂಪನಗೌಡ ಬಾದರ್ಲಿ ಅವರ ಆಣತಿಯಂತೆ ನಡೆದುಕೊಳ್ಳುತ್ತಿದ್ದು ಇವರ ಮಲತಾಯಿ ಧೋರಣೆಯಿಂದಾಗಿ ಲಿಂಗಸುಗೂರಿಗೆ ಮಂಜೂರಾಗಿದ್ದ ಆಸ್ಪತ್ರೆ ಕೈ ತಪ್ಪಿದೆ. ಇಲ್ಲಿನ ಬಡ ಕೂಲಿ ಕಾರ್ಮಿಕರು ಹೆಚ್ಚಿನ ಚಿಕಿತ್ಸೆಗಾಗಿ ಬಾಗಲಕೋಟ ಗುಲ್ಬರ್ಗ ಬಳ್ಳಾರಿ ರಾಯಚೂರು ಜಿಲ್ಲೆಗಳಿಗೆ ತರಳಬೇಕಾದ ಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದ ಅವರು ತಕ್ಷಣವೇ ಕ್ಷೇತ್ರದ ಚುನಾಯಿತ ಜನಪ್ರತಿನಿಧಿಗಳು ಹಾಗೂ ಸರಕಾರ ಲಿಂಗಸುಗೂರು ಮೀಸಲು ಕ್ಷೇತ್ರದ ಕಡೆಗೆ ಗಮನ ಹರಿಸಿ ಸಿಂಧನೂರಿಗೆ ವರ್ಗಾವಣೆಯಾಗಿರುವ ಆಸ್ಪತ್ರೆಯನ್ನು ಲಿಂಗಸಗೂರಿಗೆ ಮರಳಿಸದಿದ್ದರೆ ನಮ್ಮ ಸಂಘಟನೆಯಿಂದ ಅವರ ಮನೆಯ ಮುಂದೆ ಉಗ್ರ ಹೋರಾಟ ಮಾಡಬೇಕಾಗುತ್ತದೆ.

ಒಂದುವೇಳೆ ಅದಕ್ಕೂ ಸ್ಪಂದಿಸದಿದ್ದರೆ ಎರಡನೇ ಹಂತದ ಹೋರಾಟವಾಗಿ ಹಾಲಿ ಮಾಜಿ ಶಾಸಕರು ಹಾಗೂ ವಿಧಾನಪರಿಷತ್ ಸದಸ್ಯರ ಮನೆ ಮಂದಿ ಅಮರಣಾ ಂತ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದೆಂದು ಅವರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕರುನಾಡ ವಿಜಯ ಸೇನೆಯ ತಾಲೂಕ ಅಧ್ಯಕ್ಷ ಹನುಮಂತ ಬಡಿಗೇರ್, ತಾಲೂಕ ಉಪಾಧ್ಯಕ್ಷ ರಂಗಪ್ಪ ಬೋವಿ, ಎಸ್ ಸಿ ಎಸ್ ಟಿ ಘಟಕದ ಅಧ್ಯಕ್ಷ ದುರಗಪ್ಪ ಪೂಜಾರ್, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಜಾಫರ್ ಸಾಬ್, ತಾಲೂಕ ಕಾರ್ಯದರ್ಶಿ ಪರಶುರಾಮ್ ಗೊರೆಬಾಳ, ಮಹಿಳಾ ಘಟಕದ ಮುಖಂಡರಾದ ಶಾಂತ ಹಣಗಿ ಸೇರಿದಂತೆ ಇದ್ದರು.

# ವೃದ್ಧರಿಗೆ ಮಾಸ್ಕ್ ಕಡ್ಡಾಯ: ಸಿಎಂ

ಇದು ಗಂಭೀರವಾದ ತಳಿಯಲ್ಲ. ನೆಗಡಿ, ಕೆಮ್ಮು, ಜ್ವರ ಬಂದಿರುವ ಮಕ್ಕಳನ್ನು ಶಾಲೆಗೆ ಕಳುಹಿಸಬಾರದು ಹಾಗೂ ವೃದ್ಧರು, ವಿವಿಧ ಕಾಯಿಲೆಗಳಿಗೆ ತುತ್ತಾಗಿರರುವರು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು. ಲಸಿಕೆಗಳನ್ನು. ಮುನ್ನೆಚ್ಚರಿಕಾ ಕ್ರಮವಾಗಿ ಸಂಗ್ರಹಿಸಬೇಕು ಎಂದು ಸೂಚಿಸಲಾಗಿದೆ ಎಂದು ತಿಳಿಸಿದರು.ಎಲ್ಲರೂ ಮಾಸ್ಕ್ ಧರಿಸುವುದನ್ನು ಕಡ್ಡಾಯ ಮಾಡಿಲ್ಲ.ಆದರೆ ವೃದ್ಧರು, ಕಾಯಿಲೆಯಿರುವವರು ಮಾಸ್ಕ್ ಕಡ್ಡಾಯವಾಗಿ ಹಾಕಿಕೊಳ್ಳುವಂತೆ ಸೂಚಿಸಲಾಗಿದೆ ಎಂದರು. ವಿಮಾನ ನಿಲ್ದಾಣಗಳಲ್ಲಿ ತಪಾಸಣೆ ಮಾಡಲು ಕೇಂದ್ರದಿಂದ ಸೂಚನೆ ಬಂದಿಲ್ಲ. ಆದರೆ ಎಚ್ಚರಿಕೆ ವಹಿಸಲಾಗುವುದು ಎಂದು ವಿವರಿಸಿದರು.ಸ್ವತಂತ್ರ ಭಾರತದ ಮೊದಲನೇ ಪ್ರಧಾನಿ ಜವಾಹರ್ ಲಾಲ್ ನೆಹರು ಅವರು ಆಧುನಿಕ ಭಾರತದ ನಿರ್ಮಾತೃ ಎಂದು ಹೇಳಿದರು. ನೆಹರೂ ಅವರ ಪುಣ್ಯ ತಿಥಿಯನ್ನು ಸರ್ಕಾರ ಗೌರವ ಹಾಗೂ ಅಭಿಮಾನದಿಂದ ನೆರವೇರಿಸಿದೆ. ದೇಶದ ಬಡತನವನ್ನು ಹೋಗಲಾಡಿಸುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದರು. ಉದ್ಯೋಗ ಸೃಷ್ಟಿ, ಮಿಶ್ರ ಆರ್ಥಿಕತೆಯನ್ನು ದೇಶದಲ್ಲಿ ಪರಿಚಯಿಸಿದ್ದಲ್ಲದೆ ದೇಶದಲ್ಲಿ ಹಸಿರು ಕ್ರಾಂತಿಗೆ ಅಡಿಗಲ್ಲು ಹಾಕಿದರು. ಸಹಕಾರಿ ಚಳವಳಿ, ವಿಕೇಂದ್ರೀಕರಣಕ್ಕೆ ಬದ್ಧತೆಯಿಂದ ಕೆಲಸ ಮಾಡಿದರು. ಅವರು ಪ್ರಧಾನಿಗಳಾಗಿದ್ದ 17 ವರ್ಷಗಳ ಅವಧಿಯಲ್ಲಿ ಅನೇಕ ಅಣೆಕಟ್ಟು, ಸಾರ್ವಜನಿಕ ವಲಯದಲ್ಲಿ ಕೈಗಾರಿಕೆ, ಶಿಕ್ಷಣ ಸಂಸ್ಥೆಗಳನ್ನೂ ಸ್ಥಾಪಿಸಿದರು.ದೇಶ ಆರ್ಥಿಕವಾಗಿ ಸಬಲತೆಯನ್ನು ಕಂಡುಕೊಂಡಿದ್ದರೆ, ಆಹಾರದಲ್ಲಿ ಸ್ವಾವಲಂಬನೆಯನ್ನು ಕಂಡುಕೊಂಡಿದ್ದರೆ ನೆಹರೂ ಅವರು ಹಾಕಿದ ಅಡಿಪಾಯ ಕಾರಣ ಎಂದರು. ನೆಹರೂ ಅವರನ್ನು ಗೌರವದಿಂದ ಸ್ಮರಿಸುವ ಕೆಲಸವನ್ನು ಪ್ರತಿಯೊಬ್ಬ ಭಾರತೀಯನೂ ಮಾಡಬೇಕು ಎಂದರು. ಆಧುನಿಕ ಭಾರತಕ್ಕೆ ನೆಹರೂ ಅಡಿಪಾಯ ಹಾಕಿರದೇ ಹೋಗಿದ್ದರೆ ಇಂದಿನ ಭಾರತ ಇರುತ್ತಿರಲಿಲ್ಲ. ಆರ್ಥಿಕತೆಯಲ್ಲಿ ಜಗತ್ತಿನಲ್ಲಿ 5 ನೇ ಸ್ಥಾನದಲ್ಲಿದ್ದರೆ ಅದಕ್ಕೆ ನೆಹರೂ ಅವರೇ ಕಾರಣ ಎಂದರು.

# ರಾಜ್ಯದಲ್ಲಿ 37 ಹೊಸ ಕೊರೊನಾ ಪತ್ತೆ

ಸಿದ್ದರಾಮಯ್ಯ ಮತ್ತು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಆರೋಗ್ಯ ಸಿಬ್ಬಂದಿಗೆ ಯುದ್ಧೋಪಾದಿಯಲ್ಲಿ ಕಾರ್ಯನಿರ್ವಹಿಸಲು ನಿರ್ದೇಶನ ನೀಡಿದ್ದಾರೆ.

ಕೊರೊನಾ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಮಾರ್ಗಸೂಚಿಗಳನ್ನು ಜಾರಿಗೊಳಿಸಲು ಚಿಂತನೆ ನಡೆಸಲಾಗುತ್ತಿದೆ. ಈಗಾಗಲೇ ಆರೋಗ್ಯ ಇಲಾಖೆಯು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ತೀವ್ರಗೊಳಿಸಿದೆ.

ಇನ್ನೊಂದೆಡೆ, ಮೇ 29 ರಿಂದ ರಾಜ್ಯಾದ್ಯಂತ ಶಾಲೆಗಳು ಪುನರಾರಂಭವಾಗುತ್ತಿರುವ ಹಿನ್ನೆಲೆಯಲ್ಲಿ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಹತ್ವದ ಸೂಚನೆಯೊಂದನ್ನು ನೀಡಿದ್ದು, ಶೀತ, ಜ್ವರದಂತಹ ಲಕ್ಷಣಗಳಿರುವ ಮಕ್ಕಳನ್ನು ಶಾಲೆಗೆ ಕಳುಹಿಸಬಾರದು ಎಂದು ಪೋಷಕರಿಗೆ ತಿಳಿಸಿದ್ದಾರೆ.

ಶಾಲೆಗಳು ಕೂಡ ಇಂತಹ ಮಕ್ಕಳಿಗೆ ರಜೆ ನೀಡಬೇಕು ಎಂದು ಸೂಚಿಸಲಾಗಿದೆ. ಈ ಕುರಿತು ಶೀಘ್ರದಲ್ಲೇ ವಿವರವಾದ ಮಾರ್ಗಸೂಚಿಯನ್ನು ಹೊರಡಿಸಲಾಗುವುದು ಎಂದು ಆರೋಗ್ಯ ಇಲಾಖೆ ತಿಳಿಸಿದೆ.

ಬೆಂಗಳೂರಿನಲ್ಲಿ ಮತ್ತೊಬ್ಬರಿಗೆ ಕೊರೊನಾ

ರಾಜ್ಯದಲ್ಲಿ ಕೊರೊನಾ ಪ್ರಕರಣಗಳು ಏರಿಕೆಯಾಗುತ್ತಿದ್ದು, ಬೆಂಗಳೂರಿನ ಗಾಂಧಿನಗರದ ನಿವಾಸಿಯೊಬ್ಬರಲ್ಲಿ ಕೊರೊನಾ ಕಾಣಿಸಿಕೊಂಡಿದೆ. 46 ವರ್ಷದ ವ್ಯಕ್ತಿಯೊಬ್ಬರಿಗೆ ಕೊರೊನಾ ಸೋಂಕು ತಗುಲಿದೆ. ಯಾವುದೇ ಪ್ರವಾಸ ಕೈಗೊಳ್ಳಲಿದ್ದರು ಕೋವಿಡ್ ಪತ್ತೆಯಾಗಿದ್ದು ಆತಂಕಕ್ಕೆ ಕಾರಣವಾಗಿದೆ. ಸದ್ಯ ಅವರು ಓಂ ಐಸ್‌ಲೇಷನ್ ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಆರ್‌ಎಸ್‌ನಿಂದ ಇಲಾಖೆಗಳ ವಿರುದ್ಧ ಪ್ರತಿಭಟನೆ

ಅನಧಿಕೃತ ಪ್ಲಾಂಟ್‌ಗಳು ಪರವಾನಗಿ ಇಲ್ಲದೆ, ತೆರಿಗೆ ಪಾವತಿಸದೆ ಕಾರ್ಯನಿರ್ವಹಿಸುತ್ತಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಸಹಾಯಕ ಆಯುಕ್ತರು ಕ್ರಮ ಕೈಗೊಳ್ಳಲು ಆದೇಶಿಸಿದ್ದರೂ, ಮುಖ್ಯಾಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಪ್ರತಿಭಟನಾಕಾರರು ದೂರಿದ್ದಾರೆ.

ಮಾರ್ಚ್ 11, 2025 ರಂದು ತಾಲೂಕು ಪಂಚಾಯತ್ ಕಚೇರಿಯಲ್ಲಿ ಅರೋಲಿ ಗ್ರಾಮ ಪಂಚಾಯತಿ ಸಮಸ್ಯೆಗಳ ಕುರಿತು ವಿಚಾರಿಸಲು ಹೋದಾಗ, ಕಾರ್ಯನಿರ್ವಾಹಕ ಅಧಿಕಾರಿಗಳು ರಾಮಸ್ವಾಮಿ ಅರೋಲಿ ಅವರ ಮೇಲೆ ಏಕಾಏಕಿ ನಾಲ್ಕು ಜನರ ಗುಂಪು ಹಲ್ಲೆ ಮಾಡಿದೆ ಎಂದು ಆರೋಪಿಸಲಾಗಿದೆ. ಇಒ ತಮ್ಮ ದೂರನ್ನು ಸ್ವೀಕರಿಸದೆ ನಿರ್ಲಕ್ಷ್ಯ ತೋರಿದ್ದಾರೆ ಎಂದು ರಾಮಸ್ವಾಮಿ ದೂರಿದ್ದಾರೆ. ನಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಗಮನಕ್ಕೆ ತಂದಾಗ, ಮಾರ್ಚ್ 13, 2025 ರಂದು ರಾಮಸ್ವಾಮಿ ಅವರು ದೂರು ಸಂಖ್ಯೆ 58 ಅಡಿಯಲ್ಲಿ ದೂರು ಸಲ್ಲಿಸಿದ್ದಾರೆ. ಅದೇ ದಿನ, ಮಧ್ಯಪ್ರವೇಶಿಸಿದ ಪಂಪಾಪತಿ ಹಡಪದ, ಬಸವಪ್ರಭು ಮೇದಾ ಮತ್ತು ಜಿ. ವೆಂಕಟೇಶ ಅವರ ವಿರುದ್ಧ ಪ್ರತಿ ದೂರು ದಾಖಲಿಸಲಾಗಿದೆ. ಘಟನೆಯಲ್ಲಿ ಇರದಿದ್ದ ಪತ್ರಕರ್ತರೊಬ್ಬರನ್ನು ಮೂರನೇ ಆರೋಪಿಯನ್ನಾಗಿ ಮಾಡಿರುವುದು ಪೊಲೀಸ್ ಅಧಿಕಾರಿಗಳ ಕರ್ತವ್ಯ ಲೋಪ ಮತ್ತು ಅಧಿಕಾರ ದುರುಪಯೋಗಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಲಾಗಿದೆ. ಈ ಪ್ರಕರಣವನ್ನು ವಿಶೇಳ ತಂಡ ರಚಿಸಿ ತನಿಖೆ ನಡೆಸುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು.

ಧರಣಿ ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್ ಭೀಮರಾಯ ಅವರ ಸಮಸ್ಯೆಗಳನ್ನು ಆಲಿಸಿ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಬಸವಪ್ರಭು ಮೇದಾ, ರಾಯಪ್ಪ ವಕೀಲರು, ರಮೇಶ ನಾಯಕ, ಪಂಪಾಪತಿ ಹಡಪದ, ಜಿ.ವೆಂಕಟೇಶ, ರಾಜ ಮಡಿವಾಳ ಸೇರಿದಂತೆ ಇತರರು ಇದ್ದರು.

# ಬಡ ಮಕ್ಕಳಿಗೆ ನೀಡುತ್ತಿರುವ ಉಚಿತ ಶಿಕ್ಷಣವೇ ನಿಜವಾದ ಪೂಜೆ: ಪಟ್ಟದೇವರು



**ಬೀದರ್; ಮೇ.28–**ಬಡ ಮಕ್ಕಳಿಗೆ ನೀಡುತ್ತಿರುವ ಉಚಿತ ಶಿಕ್ಷಣವೇ ನಿಜವಾದ ಪೂಜೆಯಾಗಿದೆ ಎಂದು ಅನುಭವ ಮಂಟಪದ ಅಧ್ಯಕ್ಷರಾದ ನಾಡೋಜ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ನುಡಿದರು.

ಭಾನುವಾರ ನಗರದ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ ಬುದ್ದಿಷ್ಟ್ ಏಜ್ಯುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಡಿ ನಡೆಯುತ್ತಿರುವ ರಾಂಪುರೆ ಫೌಂಡೇಷನ್, ವಿ.ಎಂ ರಾಂಪುರೆ ಪಬ್ಲಿಕ್ ಸ್ಕೂಲ್ ಮತ್ತು ಫ್ರೀ ಸ್ಕೂ???ಗಳ ಸಹಯೋಗದಲ್ಲಿ ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನಾಚರಣೆ ಪ್ರಯುಕ್ತ ಅನಾಥ ಮತ್ತು ಬಡ ಹೆಣ್ಣು ಮಕ್ಕಳಿಗೆ ಪಠ್ಯ ಪರಿಕರಗಳು ಹಾಗೂ ಸಮವಸ್ತ್ರ ವಿತರಿಸಿ ಮಾತನಾಡಿದರು.

ಮಹಿಳೆಯರನ್ನು ದೇವತೆ ಎಂತಲೂ, ಆದಿ ಶಕ್ತಿ ಎಂತಲೂ ಕರೆಯಲ್ಪಡುವ ನಮ್ಮ ದೇಶದಲ್ಲಿ ಹೆಣ್ಣು ಮಕ್ಕಳಿಗೆ ಉಚಿತ ಶಿಕ್ಷಣ ನೀಡುವ ಮುಖೇನ ಅವರ ಬದುಕಿನಲ್ಲಿ ಹೊಸ ಚೈತನ್ಯ ಹುಟ್ಟು ಹಾಕಲು ಯುವ ಉತ್ಸಾಹಿ ಮಹೇಶ ರಾಂಪುರೆ ಉಚಿತ ಶಿಕ್ಷಣ ನೀಡಿ, ಅವರಿಗೆ ಪಠ್ಯ ಪುಸ್ತಕ, ಸಮವಸ್ತ್ರ ವಿತರಿಸಿ ಜಿಲ್ಲೆಯ ಶಿಕ್ಷಣ ಪ್ರೇಮಿಗಳಿಗೆ ಮಾದರಿಯಾಗಿದ್ದಾರೆ. ಅವರು ಮಾಡುವ ಈ ಮಹತ್ತರ ಕಾರ್ಯಕ್ಕೆ ಎಲ್ಲರು ಕೈ ಜೋಡಿಸಬೇಕಿದೆ ಎಂದರು.

ಬದುಕಿನಲ್ಲಿ ಪ್ರತಿಯೊಬ್ಬರು ಶ್ರೇಷ್ಠ ಗುರಿ ಇರಿಸಿಕೊಂಡು, ಉತ್ತಮ ಸಾಧಕರಾಗುವ ಮೂಲಕ ಸಮಾಜಮುಖಿಯಾಗಿ ಹೊರ ಹೊಮ್ಮಬೇಕು. ಒಳ್ಳೆ ಮನಸ್ಸಿನಿಂದ ಮಾಡುವ ಪ್ರತಿಯೊಂದು ಕಾರ್ಯ ಅದು ಪರಮಾತ್ಮನಿಗೆ ಮೆಚ್ಚುಗೆಯಾಗುತ್ತದೆ. ಹಾಗಾಗಿ ಮಹೇಶ ರಾಂಪುರೆ ಇದೆಲ್ಲವನ್ನು ಮೀರಿ ಧ್ವನಿಯಿಲ್ಲದವರಿಗೆ ಧ್ವನಿಯಾಗಿ, ವಿದ್ಯೆಯಿಂದ ವಂಚಿತರಾದ ಮಕ್ಕಳಿಗೆ ಉಚಿತ ಶಿಕ್ಷಣ ನೀಡುತ್ತ ಸಾವಿತ್ರಿಬಾಯಿ ಫುಲೆ ಅವರ ಕನಸ್ಸು ನನಸ್ಸು ಮಾಡಲು ಹೊರಟಿದ್ದಾರೆ ಎಂದು ಕೊಂಡಾಡಿದರು.

ಸಾಹಿತಿ ಪಾರ್ವತಿ ಸೋನಾರೆ ಮುಖ್ಯ ಅತಿಥಿಗಳಾಗಿ ಮಾತನಾಡಿ, ಸಾವಿತ್ರಿಬಾಯಿ ಫುಲೆ ತನ್ನ 9ನೇ ವಯಸ್ಸಿನಲ್ಲಿಯೆ ದಾಂಪತ್ಯ ಜೀವನಕ್ಕೆ ಕಾಲಿರಿಸಿ ಶೋಷಿತರು, ದಲಿತರು ಹಾಗೂ ಅಸ್ಪೃಶ್ಯರಿಗೆ ವಿದ್ಯೆ ಕಲಿಸಲು ಪತಿ ಜ್ಯೋತಿಬಾ ಫುಲೆಯವರೊಂದಿಗೆ ಮನೆ ತೊರೆಯಬೇಕಾಗಿ ಬಂತು. ಸಂಪ್ರದಾಯವಾದಿಗಳ ಕೆಂಗಣ್ಣಿಗೆ ಗುರಿಯಾದರೂ ಅದನ್ನು ಲೆಕ್ಕಿಸದೇ ಮತಾಂಧರಿಂದ ನಿತ್ಯ ಸಗಣಿ ಸ್ನಾನ ಮಾಡಿಸಿಕೊಂಡು ತನ್ನ ಛಲ ಬಿಡದೇ ಶಾಲೆಗೆ ಹೋಗಿ ಸೀರೆ ಬದಲಿಸಿ ತುಳಿತಕ್ಕೋಳಗಾದವರಿಗೆ ಅಕ್ಷರ ಕಲಿಸಿದ ದೇಶದ ಪ್ರಥಮ ಶಿಕ್ಷಕಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ ಎಂದರು.

ಭಾಲ್ಕೆ ಆಸ್ಪತ್ರೆಯ ಮುಖ್ಯಸ್ಥ ಡಾ.ಸೋಮಶೇಖರ ಭಾಲ್ಕೆ ಮಾತನಾಡಿ, ಯುವಕ ಮಹೇಶ ರಾಂಪುರೆ ಮಾಡುತ್ತಿರುವ ಈ ಪೂಣ್ಯ ಕಾರ್ಯಕ್ಕೆ ನಮ್ಮಂಥವರ ಅಳಿಲು ಸೇವೆ ಇರಲಿ ಎಂಬ ಕಾರಣಕ್ಕೆ ವಿ.ಎಂ ರಾಂಪುರೆ ಶಾಲೆಯಲ್ಲಿ ಓದುವ ವಿದ್ಯಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ನೀಡಲಾಗುವುದೆಂದು ಭರವಸೆ ನೀಡಿದರು.

ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ.ಸಂಜೀವಕುಮಾರ ಅತಿವಾಳೆ ಕಾರ್ಯಕ್ರಮ ಉದ್ಘಾಟಿಸಿದರು. ಲಿಂಗಾಯತ ಸಮನ್ವಯ ಸಮಿತಿ ಸಂಚಾಲಕ ಶ್ರೀಕಾಂತ ಸ್ವಾಮಿ, ಬಾಪು ಗ್ರಾಮೀಣಾಭಿವೃದ್ಧಿ ಸಂಸ್ಥೆ ಅಧ್ಯಕ್ಷ ಕಾಶಿನಾಥ ಪಾಟೀಲ, ಅನುದಾನ ರಹಿತ ಖಾಸಗಿ ಶಾಲಾ ಅಡಳಿತ ಮಂಡಳಿ ಜಿಲ್ಲಾಧ್ಯಕ್ಷ ರಾಜೇಂದ್ರ ಮಣಗೇರೆ, ದಲಿತ ಮುಖಂಡರಾದ ಅನೀಲಕುಮಾರ ಬೆಲ್ದಾರ್, ದೇವೇಂದ್ರ ಸೋನಿ, ಬಸವರಾಜ ಮಯೂರ, ವೀರಶೆಟ್ಟಿ ದೀನೆ, ಶ್ರೀಪತರಾವ ದೀನೆ, ವಿಜಯಕುಮಾರ ಸೋನಾರೆ, ಕು.ಸುಸ್ಮಿತಾ ಮೋರೆ ಹಾಗೂ ಇತರರು ವೇದಿಕೆಯಲ್ಲಿದ್ದರು. ಸಂಸ್ಥೆಯ ಸಂಸ್ಥಾಪಕಿ ಶಾರದಾಬಾಯಿ ರಾಂಪುರೆ ಅಧ್ಯಕ್ಷತೆ ವಹಿಸಿದ್ದರು.

ಇದೇ ವೇಳೆ ಬಡ ಹಾಗೂ ಅನಾಥ ಮಕ್ಕಳಿಗೆ ಪಠ್ಯ ಪರಿಕರಗಳು ಹಾಗೂ ಸಮವಸ್ತ್ರಗಳನ್ನು ಉಚಿತವಾಗಿ ವಿತರಿಸಲಾಯಿತು. ಬುದ್ದಿಷ್ಟ್ ಏಜ್ಯುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಮಹೇಶ.ಎಸ್.ರಾಂಪುರೆ ವಂದನೆ ಸಲ್ಲಿಸಿದರು.

ಆರಂಭದಲ್ಲಿ ಶಾಲಾ ವಿದ್ಯಾರ್ಥಿಗಳಿಂದ ನಾಡಗೀತೆ ಜರುಗಿತು. ಚನ್ನಬಸವ ಹೇಡೆ ಸ್ವಾಗತಿಸಿ, ಪ್ರೇಮ ಅವಿನಾಶ ಕಾರ್ಯಕ್ರಮ ನಿರೂಪಿಸಿದರು.

# ಕೂಡಲ ಸಂಗಮದಲ್ಲಿ ಬ್ರೀಜ್ ಕಂ.ಬ್ಯಾರೇಜ್ ನಿರ್ಮಾಣ



**ಕಾಳಗಿ,ಮೇ.28–**ಸಾವಿರಾರು ಎಕರೆ ಜಮೀನಿಗೆ ನೀರಾವರಿ ಅನುಕುಲವಾಗುವಂತೆ ಮಲಘಾಣ ಸೀಮೆಯಲ್ಲಿ ಕೂಡಿಕೊಳ್ಳುವ ಕಾಳಗಿಯ ರೌದ್ರಾವತಿ ನದಿ ಹಾಗೂ ಬೆಣ್ಣೆತೊರೆ ನದಿಯ ಕೂಡಲ ಸಂಗಮದಲ್ಲಿ ಹೊಸದೊಂದು ಬ್ರೀಜ್ ಕಂ.ಬ್ಯಾರೇಜ್ ನಿರ್ಮಾಣ ಮಾಡುವುದಾಗಿ ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಸಚಿವರಾದ ಎನ್. ಎಸ್. ಭೋಸರಾಜ ಭರವಸೆ ನೀಡಿದರು.

ಪಟ್ಟಣದ ದಕ್ಷಿಣಕಾಶಿ ಕಾಳಗಿ ಶ್ರೀನೀಲಕಂಠ ಕಾಳೇಶ್ವರ ದೇವಸ್ಥಾನಕ್ಕೆ ಸೋಮವಾರ ಭೇಟಿ ನೀಡಿದ ಸಚಿವರು, ನೀಲಕಂಠನ ದರ್ಶನಾಶೀರ್ವಾದ ಪಡೆದು, ಇಲ್ಲಿಯ ಹಳೆಯ ದೇಗುಲಗಳು, ನೈಸರ್ಗಿಕವಾಗಿ ಪುಟಿದೇಳುತ್ತಿರುವ ಜೀವ ಜಲಧಾರೆಗಳ ಜಲ ಸಂಪತ್ತನ್ನು ಕಂಡ ಸಣ್ಣ ನೀರಾವರಿ ಸಚಿವರು ಸಂತೋಷ ಪಟ್ಟರು.

ಅದ್ಭುತ ಸ್ವಾಭಾವಿಕ ಸಂಪತ್ತಿನಿಂದ ಕೂಡಿರುವ ಕಾಳಗಿ ಪಟ್ಟಣವು ಈ ಭಾಗದ ಜನತೆಗೆ ಕಲ್ಪವೃಕ್ಷವಾಗಿದೆ.

ಈ ಜಲ ಸಂಪತ್ತಿನ ಸದುಪಯೋಗ ಇಲ್ಲಿಯ ರೈತರು, ಸಂಪೂರ್ಣವಾಗಿ ಲಾಭ ತೆಗೆದುಕೊಳ್ಳಬೇಕು ಎಂದರು.

ಕಾಳಗಿಯ ಜಲ ಸಂಪತ್ತನ್ನು ಸಂಪೂರ್ಣವಾಗಿ ರೈತರು ಉಪಯೋಗಿಸಿಕೊಳ್ಳುವುದಕ್ಕಾಗಿ ಬೇಕಾಗುವ ಎಲ್ಲಾ ಸೌಕರ್ಯಗಳನ್ನು ನೀಡಲು ನಮ್ಮ ಸರಕಾರ ಬದ್ಧವಾಗಿದೆ ಎಂದರು.

ಕಲ್ಯಾಣ ಕರ್ನಾಟಕದ ರೈತರ ಅಭಿವೃದ್ಧಿಗಾಗಿ ಈ ವರ್ಷ 5,300 ಬೊರವೆಲ್ ಪೂರೈಸಿದ್ದೆವೆ, ಇನ್ನೂ ಅಗತ್ಯಕ್ಕೆ ತಕ್ಕಂತೆ ಪೂರೈಸಲಾಗುತ್ತದೆ ಎಂದರು.

ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ ಮಾತನಾಡಿ, ಮಲಘಾಣ ಸೀಮೆಯ ಸಂಗಮನಾಥ ದೇವಸ್ಥಾನದವರೆಗಿನ ನದಿಯ ಸ್ವಚ್ಚತೆ ಮಾಡುವುದು ಹಾಗೂ ಕಾಳಗಿ ಪಟ್ಟಣದ ನಂದೂರ ಶಿವಲಿಂಗೇಶ್ವರ ದೇವಸ್ಥಾನ ಏಳಿಗೆ ನಡೆಸುವುದಾಗಿ ತಿಳಿಸಿದರು.

ಕೆಪಿಸಿಸಿ ಉಪಾಧ್ಯಕ್ಷ ಸುಭಾಷ ರಾಠೋಡ, ಮಾಜಿ ಜಿಪಂ ಸದಸ್ಯ ರಾಜೇಶ ಗುತ್ತೇದಾರ, ಗ್ರಾ.ಪಂ ಮಾಜಿ ಅಧ್ಯಕ್ಷ ರಾಘವೇಂದ್ರ ಗುತ್ತೇದಾರ, ಪರಮೇಶ್ವರ ಮಡಿವಾಳ, ಸುಧಾಕಾರ ಪಾಟೀಲ, ದೇವಿಂದ್ರಪ್ಪ ಹೆಬ್ಬಾಳ, ವೇದಪ್ರಕಾಶ ಮೊಟಗಿ, ಶಿವಶರಣಪ್ಪ ಕಮಲಾಪೂರ, ಅಸ್ಲಾಂಬೇಗ್ ಬಿಜಾಪುರ, ಜಿಯಾವುದ್ದಿನ ಸೌದಾಗಾರ, ಶಿವಾನಂದ ಮಜ್ಜಗಿ, ಪ್ರದೀಪ ಡೊಣ್ಣೂರ, ಶರಣು ಮಜ್ಜಗಿ, ದಿನೇಶ ಮೋಘಾ, ಜಗನ್ನಾಥ ಚಂದನಕೇರಿ, ಸಂತೋಷ ನರನಾಳ, ಸಂತೋಷ ಪತಂಗೆ, ರವಿದಾಸ ಪತಂಗೆ, ಭೀಮರಾಯ ಮಲಘಾಣ, ಬಲರಾಮ ವಲ್ಯಾಪುರೆ, ದತ್ತು ಗುತ್ತೇದಾರ, ಪ್ರವೀಣ ನಾಮದಾರ, ಪುರುಷೋತ್ತಮ ಗುತ್ತೇದಾರ, ಗೊವಿಂದರೆಡ್ಡಿ ತುಮಕುಂಟಿ, ಕವಿತಾ ರಜಪೂತ, ಗೀತಾ ಸಿಂಗಶೆಟ್ಟಿ, ಸುವರ್ಣ ಪರುತೆ, ಗೌರಿಶಂಕರ ಗುತ್ತೇದಾರ, ಶರಣಪ್ಪ ಬೆಲೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 'ಆಪರೇಷನ್ ಸಿಂಧೂರ್' ಕ್ಯಾಮೆರಾದಲ್ಲಿ ರೆಕಾರ್ಡ್ ಆಗಿದೆ

**ಗಾಂಧಿನಗರ(ಗುಜರಾತ್) ಮೇ.28–** ಪಾಕಿಸ್ತಾನದ ವಿರುದ್ಧ ಆಪರೇಷನ್ ಸಿಂಧೂರ್‌ನಲ್ಲಿ ಭಾರತ ನಡೆಸಿದ ವೈಮಾನಿಕ ದಾಳಿಯಲ್ಲಿ ಕೇವಲ 22 ನಿಮಿಷಗಳಲ್ಲಿ 09 ಭಯೋತ್ಪಾದಕ ಅಡಗುತಾಣಗಳು ನಾಶವಾದವು. ಪುರಾವೆಗಾಗಿ ಇಡೀ ಕಾರ್ಯಾಚರಣೆಯನ್ನು ಕ್ಯಾಮೆರಾದಲ್ಲಿ ರೆಕಾರ್ಡ್ ಮಾಡಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.



ತವರು ರಾಜ್ಯ ಗುಜರಾತ್‌ನ ಗಾಂಧಿನಗರದಲ್ಲಿ ನಡೆದ ರ್ಯಾಲಿ ಮಾತನಾಡಿದ ಅವರು, ಪುರಾವೆಗಾಗಿ ಯಾವುದೇ ಕರೆಗಳನ್ನು ನಿಶ್ಯಬ್ದಗೊಳಿಸಲು ಇಡೀ ಕಾರ್ಯಾಚರಣೆಯನ್ನು ಕ್ಯಾಮೆರಾದಲ್ಲಿ ರೆಕಾರ್ಡ್ ಮಾಡಲಾಗಿದೆ. ಇದೊಂದು ನಿರ್ಣಾಯಕ ಕ್ರಮ ಎಂದು ಕರೆದರು. ಭಾರತ ಮತ್ತು ಪಾಕಿಸ್ತಾನ ಯುದ್ಧಕ್ಕೆ ಹೋದಾಗಲೆಲ್ಲಾ ಭಾರತೀಯ ಸಶಸ್ತ್ರ ಪಡೆಗಳು ಮತ್ತು ಧೈರ್ಯಶಾಲಿಗಳು ಅವರನ್ನು ಎಂದಿಗೂ ಮರೆಯಲಾಗದ ರೀತಿಯಲ್ಲಿ ಸೋಲಿಸಿದ್ದಾರೆ. ಭಾರತದ ವಿರುದ್ಧ ನೇರ ಯುದ್ಧವನ್ನು ಎಂದಿಗೂ ಗೆಲ್ಲಲು ಸಾಧ್ಯವಿಲ್ಲ ಎಂದರು.

ಆಪರೇಷನ್ ಸಿಂಧೂರ್‌ಲ್ಲಿ ಕೊಲ್ಲಲ್ಪಟ್ಟ ಭಯೋತ್ಪಾದಕರಿಗೆ ಪಾಕಿಸ್ತಾನಿ ಸೇನೆಯ ಗೌರವವು ಭಾರತದ ವಿರುದ್ಧದ ಭಯೋತ್ಪಾದಕ ದಾಳಿಗಳನ್ನು ಇನ್ನು ಮುಂದೆ ಪ್ರಾಕ್ಸಿ ಯುದ್ಧಎಂದು ಕರೆಯಬಾರದೆಂಬುದನ್ನು ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಭಯೋತ್ಪಾದಕ ಚಟುವಟಿಕೆಗಳು ಪ್ರಾಕ್ಸಿ ಯುದ್ಧವಲ್ಲ ಆದರೆ ಉತ್ತಮವಾಗಿ ಯೋಜಿಸಲಾದ ಯುದ್ಧ ತಂತ್ರವಾಗಿದೆ ಎಂದು ಇದು ಸಾಬೀತುಪಡಿಸುತ್ತದೆ. ನೀವು ಈಗಾಗಲೇ ಯುದ್ಧದಲ್ಲಿದ್ದೀರಿ, ಮತ್ತು ಅದಕ್ಕೆ ತಕ್ಕಂತೆ ನಿಮಗೆ ಪ್ರತಿಕ್ರಿಯೆ ಸಿಗುತ್ತದೆ. ನಾವು ಯಾರೊಂದಿಗೂ ದ್ವೇಷವನ್ನು ಬಯಸುವುದಿಲ್ಲ. ನಾವು ಶಾಂತಿಯುತವಾಗಿ ಬದುಕಲು ಬಯಸುತ್ತೆ?ವೆ. ಪ್ರಪಂಚದ ಕಲ್ಯಾಣಕ್ಕೆ ಕೊಡುಗೆ ನೀಡಲು ನಾವು ಪ್ರಗತಿ ಹೊಂದಲು ಬಯಸುತ್ತೇವೆ ಎಂದು ಹೇಳಿದರು.

ಗಡಿಯಾಚೆಗಿನ ಭಯೋತ್ಪಾದನೆಗೆ ಸಂಬಂಧಿಸಿದಂತೆ ಪಾಕಿಸ್ತಾನ ವನ್ನು ತರಾಟೆಗೆ ತೆಗೆದುಕೊಂಡ ಪ್ರಧಾನಿ ನರೇಂದ್ರ ಮೋದಿ, ನೆರೆಯ ರಾಷ್ಟ್ರವು ಪರೋಕ್ಷ ಯುದ್ಧದ ಮೂಲಕ ದೇಶದ ಶಾಂತಿಗೆ ಸವಾಲು ಹಾಕಿದಾಗ ಭಾರತ ಮೌನವಾಗಿರಲು ಸಾಧ್ಯವಿಲ್ಲ ಎಂದು ಎಚ್ಚರಿಕೆ ನೀಡಿದರು.

ಭಯೋತ್ಪಾದನೆ ಪಾಕಿಸ್ತಾನದ ಯುದ್ಧ ತಂತ್ರವಾಗಿದ್ದು, ಭಾರತ ಅದಕ್ಕೆ ತಕ್ಕಂತೆ ಪ್ರತಿಕ್ರಿಯಿಸುತ್ತದೆ.ನಾವು ಶಾಂತಿಯಿಂದ ಇರಲು ಬಯಸುತ್ತೇವೆ ಮತ್ತು ಇತರರು ಶಾಂತಿಯಿಂದ ಬದುಕಲು ಬಿಡುತ್ತೇವೆ. ಆದರೆ ಪ್ರಾಕ್ಸಿ ಯುದ್ಧದ ಮೂಲಕ ನಮ ಶಕ್ತಿಯನ್ನು ಪ್ರಶ್ನಿಸಿದಾಗ, ನಾವು ಮೌನವಾಗಿರಲು ಸಾಧ್ಯವಿಲ್ಲ. ಭಯೋತ್ಪಾದನೆಯು ಪಾಕಿಸ್ತಾನದ ಪರೋಕ್ಷ ಯುದ್ಧವಲ್ಲ, ಬದಲಾಗಿ ಅದು ಒಂದು ಯುದ್ಧ ತಂತ್ರ ಎಂಬುದನ್ನು ಇದು ಸಾಬೀತುಪಡಿಸುತ್ತದೆ. ನಾವು ಅದಕ್ಕೆ ತಕ್ಕಂತೆ ಉತ್ತರಿಸುತ್ತೆ?ವೆ ಎಂದು ಅವರು ಹೇಳಿದರು.

ರ್ಯಾಲಿಯನ್ನು ಉದ್ದೇಶಿಸಿ ಮಾತನಾಡುವ ಮೊದಲು, ಮೋದಿ ಮಂಗಳವಾರ ಬೆಳಿಗ್ಗೆ ಗಾಂಧಿನಗರದಲ್ಲಿ ಮೆಗಾ ರೋಡ್ ಶೋ ನಡೆಸಿದರು, ಅವರನ್ನು ಸ್ವಾಗತಿಸಲು ಜನಸಮೂಹ ಜಮಾಯಿಸಿತ್ತು. ಎರಡು ದಿನಗಳ ಗುಜರಾತ್ ಭೇಟಿಯ ಸಂದರ್ಭದಲ್ಲಿ ಪ್ರಧಾನಿಯವರ ನಾಲ್ಕನೇ ರೋಡ್ ಶೋ ಇದಾಗಿದೆ. ಏಪ್ರಿಲ್ 22ರ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತದ ಮಿಲಿಟರಿ ಪ್ರತಿಕ್ರಿಯೆಯಾದ ಆಪರೇಷನ್ ಸಿಂಧೂರ್ ನಂತರ ಇದು ಅವರ ತವರು ರಾಜ್ಯಕ್ಕೆ ಅವರ ಮೊದಲ ಭೇಟಿಯಾಗಿದೆ.

ಗಾಂಧಿನಗರದ ರಾಜಭವನದಲ್ಲಿ ಆರಂಭವಾದ ರೋಡ್ ಶೋ ಮಹಾತ ಮಂದಿರದಲ್ಲಿ ಕೊನೆಗೊಳ್ಳಲಿದೆ. ಮಾರ್ಗದುದ್ದಕ್ಕೂ ಜನರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿ ತ್ರಿವರ್ಣ ಧ್ವಜವನ್ನು ಬೀಸಿದರು.ಸೋಮವಾರ ಮೋದಿ ವಡೋದರಾ, ಭುಜ್ ಮತ್ತು ಅಹಮದಾಬಾದ್‌ನಲ್ಲಿ ರೋಡ್‌ಶೋನಡೆಸಿದರು.

# ಬೆಂಗಳೂರಿನಲ್ಲಿ 1500 ಕೋಟಿ ಮೌಲ್ಯದ 128 ಎಕರೆ ಅರಣ್ಯ ಒತ್ತುವರಿ ತೆರವು




**ಬೆಂಗಳೂರು,ಮೇ.28–**ಮಹಾನಗರದಲ್ಲಿ ಭೂಮಿಗೆ ಬಂಗಾರದ ಬೆಲೆ ಇದೆ. ಇಲ್ಲಿ ಹಲವು ದಶಕದಿಂದ ಅರಣ್ಯ ಭೂಮಿ ಒತ್ತುವರಿ ಆಗಿದ್ದು, ತಾವು ಸಚಿವನಾದ ಬಳಿಕ ಎರಡು ವರ್ಷದಲ್ಲಿ ಸುಮಾರು 4000 ಕೋಟಿ ರೂ. ಮಾರುಕಟ್ಟೆ ಮೌಲ್ಯದ 128 ಎಕರೆ ಅರಣ್ಯ ಒತ್ತುವರಿಯನ್ನು ತೆರವು ಮಾಡಿಸಿರುವುದಾಗಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.

ಕೇಂದ್ರ ಸರ್ಕಾರಿ ಸ್ವಾಮ್ಯದ ಎಚ್.ಎಂ.ಟಿ ತನ್ನ ವಶದಲ್ಲಿರುವ ಸುಮಾರು 14,300 ಕೋಟಿ ರೂ. ಮೌಲ್ಯದ 444 ಎಕರೆ ಅರಣ್ಯ ಭೂಮಿಯನ್ನು ರಿಯಲ್ ಎಸ್ಟೇಟ್ ಸಂಸ್ಥೆಗಳು ಸೇರಿದಂತೆ ಹಲವು ಸಂಸ್ಥೆಗಳಿಗೆ ಮಾರಾಟ ಮಾಡುವುದನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ. ಈ ಅರಣ್ಯ ಜಮೀನು ಹಿಂಪಡೆದು, ಉದ್ಯಾನವಾಗಿ ಉಳಿಸಿಕೊಳ್ಳಲು ತೀರ್ಮಾನಿಸಲಾಗಿದ್ದು, ಇದಕ್ಕಾಗಿ ಕಾನೂನು ಹೋರಾಟ ನಡೆದಿದೆ. ಸುಪ್ರಿ?ಂಕೋರ್ಟ್ ನಲ್ಲಿ ಅರ್ಜಿ ವಿಚಾರಣೆ ನಡೆಯುತ್ತಿದೆ ಎಂದು ಹೇಳಿದರು.

ಹಳೆ ಮೈಸೂರು ಭಾಗದಲ್ಲಿ ಬ್ರಿಟಿಷರ ಕಾಲದಲ್ಲಿ ವಿವಿಧ ವ್ಯಕ್ತಿ, ಸಂಸ್ಥೆಗಳಿಗೆ ಸುಮಾರು 5050 ಎಕರೆ ಅರಣ್ಯ ಭೂಮಿಯನ್ನು ದೀರ್ಘಕಾಲದ (999 ವರ್ಷ) ಗುತ್ತಿಗೆ ನೀಡಲಾಗಿತ್ತು. ಈ 999 ವರ್ಷದ ಗುತ್ತಿಗೆ ಅವಧಿಯನ್ನು ಸರ್ಕಾರ 99 ವರ್ಷಕ್ಕೆ ಇಳಿಕೆ ಮಾಡಿ ಗೆಜೆಟ್ ಅಧಿಸೂಚನೆ ಹೊರಡಿಸಿದೆ. ಈಗ ಇವುಗಳಲ್ಲಿ ಕೆಲವು ಗುತ್ತಿಗೆ ಅವಧಿ ಮುಗಿದಿದ್ದರೂ ಅರಣ್ಯ ಇಲಾಖೆಗೆ ಜಮೀನು ಬಿಟ್ಟುಕೊಡದೆ ನ್ಯಾಯಾಲಯದ ಮೆಟ್ಟಿಲೇರಿದ್ದಾರೆ. ಈ ಎಲ್ಲ ಭೂಮಿ ಹಿಂಪಡೆಯಲು ಕಾನೂನು ಹೋರಾಟ ಮಾಡಲಾಗುತ್ತಿದೆ. ಹೈಕೋರ್ಟ್‌ನಲ್ಲಿ ಈ ಪ್ರಕರಣಗಳ ಅರ್ಜಿ ವಿಚಾರಣೆ ಹಂತದಲ್ಲಿದೆ ಎಂದು ವಿವರಿಸಿದರು.

ಬೆಂಗಳೂರು ನಗರದಲ್ಲಿ ಅಪರೂಪದ ಹುಲ್ಲುಗಾವಲಿದೆ. ಇದು ನೂರಾರು ಪ್ರಭೇದದ ಪಕ್ಷಿಗಳ ಸಂತಾನೋತ್ಪತ್ತಿಯ ತಾಣವಾಗಿದ್ದು, ಈ ಸುಂದರ ಪರಿಸರ ಉಳಿಸಲು ದಶಕಗಳಿಂದ ಹೋರಾಟ ನಡೆದಿತ್ತು. ತಾನು ಸಚಿವನಾದ ಬಳಿಕ, ಹಲವು ಒತ್ತಡದ ನಡುವೆಯೂ ಹೆಸರುಘಟ್ಟ ಕೆರೆ ಸುತ್ತಮುತ್ತಲ್ಲಿರುವ ಅಪರೂಪದ ಹುಲ್ಲುಗಾವಲು ರಕ್ಷಣೆಗಾಗಿ 5678 ಎಕರೆ ಪ್ರದೇಶವನ್ನು ಗ್ರೇಟರ್ ಹೆಸರುಘಟ್ಟ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿದ್ದಾಗಿ ತಿಳಿಸಿದರು.

ಸರ್ಕಾರದ ಈ ನಿರ್ಧಾರಕ್ಕೆ ಪಕ್ಷಭೇದ ಮರೆತು ಎಲ್ಲ ಕ್ಷೇತ್ರದ ಗಣ್ಯರೂ ಅಭಿನಂದನೆ ಸಲ್ಲಿಸಿದ್ದಾರೆ. ಇಂತಹ ಉತ್ತಮ ಕಾರ್ಯ ಮಾಡಿದಾಗ ಸಿಗುವ ಆನಂದ, ಸಂತೋಷ ಅಪರಿಮಿತ ಎಂದು ಈಶ್ವರ್ ಖಂಡ್ರೆ ಸಂತೃಪ್ತಿ ವ್ಯಕ್ತಪಡಿಸಿದರು.

# ಪಾಕ್ ಸೇನಾ ಮುಖ್ಯಸ್ಥ ಒಬ್ಬ ಮೂರ್ಖ: ಓವೈಸಿ

**ಕುವೈತ್,ಮೇ28–** ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರನ್ನು ಒಬ್ಬ ಜೋಕರ್ ಎಂದು ಸಂಸದ ಅಸಾದುದ್ದೀನ್ ಓವೈಸಿ ಹಿಗ್ಗಾಮುಗ್ಗ ತರಾಟೆಗೆ ತೆಗೆದುಕೊಂಡಿದ್ದು, ಸರಿಯಾಗಿ ನಕಲನ್ನೆ ಮಾಡಲು ಬಾರದಿರು ವವರು ಭಾರತದ ಜೊತೆ ಸ್ಪರ್ಧೆಗಿಳಿಯಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.



ಕುವೈತ್‌ನಲ್ಲಿರುವ ಭಾರತೀಯ ವಲಸಿಗರೊಂದಿಗೆ ನಡೆದ ಸಂವಾದದದಲ್ಲಿ, ಅಸಾದುದ್ದೀನ್ ಓವೈಸಿ ಅವರು ಪಾಕಿಸ್ತಾನದ ನಕಲಿ ಅಜೆಂಡಾಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟರು. ಪಾಕಿಸ್ತಾನದ ಭೂಸೇನಾ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ಅವರು, ಪಾಕಿಸ್ತಾನ ಪ್ರಧಾನಮಂತ್ರಿ ಶೆಹಬಾಜ್ ಷರೀಫ್ ಅವರಿಗೆ, ಆಪರೇಷನ್ ಬನ್ಯಾನ್ ನಕಲಿ ಫೋಟೋ ಉಡುಗೊರೆ ನೀಡಿದ ಪ್ರಸಂಗವನ್ನು ಅಸಾದುದ್ದೀನ್ ಓವೈಸಿ ವ್ಯಂಗ್ಯವಾಡಿದರು.

ಪಾಕಿಸ್ತಾನಿ ಸೇನಾ ಮುಖ್ಯಸ್ಥರು ಪಾಕಿಸ್ತಾನಿ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೆ ಒಂದು ಫೋಟೋವನ್ನು ಉಡುಗೊರೆಯಾಗಿ ನೀಡಿದ್ದಾರೆ.ಈ ಮೂರ್ಖ ಜೋಕರ್‌ಗಳು ಭಾರತದೊಂದಿಗೆ ಸ್ಪರ್ಧಿಸಲು ಬಯಸುತ್ತಾರೆ, ಅವರು 2019ರ ಚೀನಾದ ಸೇನಾ ಕವಾಯತಿನ ಛಾಯಾಚಿತ್ರವನ್ನು ನೀಡಿ ಅದು ಭಾರತದ ವಿರುದ್ಧದ ವಿಜಯ ಎಂದು ಹೇಳಿಕೊಂಡಿದ್ದಾರೆ. ಅವರಿಗೆ ಸರಿಯಾದ ಛಾಯಾಚಿತ್ರವನ್ನು ಸಹ ನೀಡಲು ಸಾಧ್ಯವಿಲ್ಲ. ನಕಲ್ ಕರ್ನೆ ಕೆ ಲಿಯೇ ಅಕಲ್ ಚಾಹಿಯೇ, ಇಂಕೆ ಪಾಸ್ ಅಕಲ್ ಭೀ ನಹೀ ಹೈ ( ಇದು ನಕಲಿಸಲು ಮಿದುಳುಗಳನ್ನು ತೆಗೆದುಕೊಳ್ಳುತ್ತದೆ, ಮತ್ತು ಅವರು ಅದನ್ನು ಹೊಂದಿಲ್ಲ) ಎಂದು ಕುಹಕವಾಡಿದರು.

ಡಿಸೆಂಬರ್ 2023ರಲ್ಲಿ ಭಾರತವು ವಿಶ್ವಸಂಸ್ಥೆಯ ನಿರ್ಬಂಧ ಸಮಿತಿಗೆ, ದಿ ರೆಸಿಸ್ಟನ್ ಫೋರ್ಸ್ (ಟಿಆರ್‌ಎಫ್) ಲಷ್ಕರ್–ಎ–ತೋಯ್ಬಾ (ಎಲ್‌ಇಟಿ) ಯ ಅಂಗಸಂಸ್ಥೆ ಎಂಬುದನ್ನು ಮನವರಿಕೆ ಮಾಡಿಕೊಟ್ಟಿದ್ದೇವು. ಮೇ 2024ರಲ್ಲಿ ಈ ಸಂಘಟನೆ ಭಾರತದ ಮೇಲೆ ದಾಳಿ ಮಾಡಬಹುದಾದ ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ಎಂದು ಸ್ಪಷ್ಟಪಡಿಸಿದ್ದೇವು. ಆದರೆ ಭದ್ರತಾ ಮಂಡಳಿಯ ಹೇಳಿಕೆಯಲ್ಲಿ ಟಿಆರೆಫ್ ಹೆಸರಿನ ಉಲೇಖವಿರದಂತೆ ಪಾಕಿಸ್ತಾನ ಪ್ರಯತ್ನಪಟ್ಟಿತು ಎಂದು ಎಐಎಂಐಎಂ ಸಂಸದ ಗುಡುಗಿದರು.

ಇನ್ನು ಪಾಕಿಸ್ತಾನವು ಭಾರತೀಯ ಮುಸ್ಲಿಮರ ಬಗ್ಗೆ ಚಿಂತಿಸುವ ಅಗತ್ಯವಿಲ್ಲ ಎಂದು ಹೇಳಿರುವ ಅಸಾದುದ್ದೀನ್ ಓವೈಸಿ, ಭಾರತೀಯ ಮುಸ್ಲಿಮರೊಂದಿಗೆ ಪಾಕಿಸ್ತಾನ ತನ್ನನ್ನು ಹೋಲಿಕೆ ಮಾಡಿಕೊಂಡರೆ ಪರಿಣಾಮ ನೆಟ್ಟಗಿರುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಅಲ್ಲದೇ ಭಾರತೀಯ ಮುಸ್ಲಿಮರು ಪಾಕಿಸ್ತಾನದವರಿಗಿಂತ ಹೆಚ್ಚು ಪ್ರಾಮಾಣಿಕರು ಎಂದು ಎಐಎಂಐಎಂ ಸಂಸದರು ನೆರೆ ರಾಷ್ಟ್ರಕ್ಕೆ ಸೂಕ್ತ ತಿರುಗೇಟು ನೀಡಿದರು.

ಓವೈಸಿ ಅವರ ಹೇಳಿಕೆಗೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಅನುಮೋದನೆ ನೀಡಿದ್ದಾರೆ . ಕನಿಷ್ಠ ಪಕ್ಷ ಅಸಾದುದ್ದೀನ್ ಓವೈಸಿ ಅತ್ಯಂತ ನಿರ್ಣಾಯಕ ಸಮಯದಲ್ಲಿ ನಿಜವಾದ ಭಾರತೀಯನಾಗಿ ಮಾತನಾಡುತ್ತಿದ್ದಾರೆ, ಎಂದು ರಿಜಿಜು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

# ಬೈಕ್ ಕಳ್ಳನ ಬಂಧನ 5 ಲಕ್ಷ ಮೌಲ್ಯದ ವಾಹನಗಳು ಜಪ್ತಿ

**ಬೆಂಗಳೂರು, ಮೇ.28–**ದ್ವಿ ಚಕ್ರ ವಾಹನಗಳನ್ನು ಕಳವು ಮಾಡುತ್ತಿದ್ದ ಕಳ್ಳನನ್ನು ಬಂಧಿಸಿರುವ ತಲಘಟ್ಟಪುರ ಪೊಲೀಸರು 5 ಲಕ್ಷ ಮೌಲ್ಯದ ಮಾಲುಗಳನ್ನು ಜಪ್ತಿ ಮಾಡಿದ್ದಾರೆ.

ಬಂಧಿತ ಆರೋಪಿಯಿಂದ ಲಕ್ಷ ಮೌಲ್ಯದ 7 ದ್ವಿ–ಚಕ್ರ ವಾಹನಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ. ತಲಘಟ್ಟಪುರದ ಗಾಣಿಗಾರಪಾಳ್ಯದ ಮನೆಯೊಂದರ ಬಳಿ ನಿಲ್ಲಿಸಿದ್ದ ದ್ವಿ–ಚಕ್ರ ವಾಹನ ಕಳವು ಮಾಡಿದ ಪ್ರಕರಣ ದಾಖಲಿಸಿ ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಂಡು ಆರೋಪಿಯನ್ನು ಬಂಧಿಸಲಾಗಿದೆ.

ಇಬ್ಬರು ಬಂಧನ:

ನಿಷೇದಿತ ಮಾದಕ ವಸ್ತುವಾದ ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರು ಹೊರರಾಜ್ಯದ ಡ್ರಗ್ಸ್ ಪೆಡ್ಲರ್ ಗಳನ್ನು ಅಮೃತಹಳ್ಳಿ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳಿಂದ 2 ಲಕ್ಷ ಮೌಲ್ಯದ 5 ಕೆ.ಜಿ ಗಾಂಜಾ ವಶಪಡಿಸಿಕೊಳ್ಳಲಾಗಿದೆ, ಅಮೃತಹಳ್ಳಿ ಕೆರೆ ಮುಂಭಾಗದ ಖಾಲಿ ಜಾಗದಲ್ಲಿ ಬಂಧಿತ ಆರೋಪಿಗಳು ಗಾಂಜಾವನ್ನಿಟ್ಟುಕೊಂಡು ಯುವಕರಿಗೆ ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದಾಗ ಕಾರ್ಯಾಚರಣೆ ಕೈಗೊಂಡು ಬಂಧಿಸಲಾಗಿದೆ.

# ರೇಸ್ ವಾಕ್‌ನಲ್ಲಿ ಕಂಚು ಗೆದ್ದ ಭಾರತೀಯ

**ಗುಮಿ (ದಕ್ಷಿಣ ಕೊರಿಯಾ),ಮೇ.28–**ಇಲ್ಲಿ ನಡೆದ 26ನೇ ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಪುರುಷರ 20 ಕಿ.ಮೀ ಓಟದ ನಡಿಗೆ ಸ್ಪರ್ಧೆಯಲ್ಲಿ ಭಾರತಕ್ಕೆ ಕಂಚಿನ ಪದಕ ದಕ್ಕಿದೆ.




25 ವರ್ಷದ ಭಾರತೀಯ ನಡಿಗೆಗಾರ ಸರ್ವಿನ್ ಸೆಬಾಸ್ಟಿಯನ್ ಅವರು 1:21:13.60 ಸೆಕೆಂಡುಗಳಲ್ಲಿ ಗುರಿ ತಲುಪಿ, ಚೀನಾದ ವಾಂಗ್ ಝೂವೋಝೂವೊ (1:20:36.90) ಮತ್ತು ಜಪಾನ್‌ನ ಕೆಂಟೊ ಯೋಶಿಕಾವಾ (1:20:44.90) ಅವರಿಗಿಂತ ಹಿಂದೆ ನಿಂತು ಟೂರ್ನಮೆಂಟ್‌ನ ಮೊದಲ ಸ್ಪರ್ಧೆಯಲ್ಲಿ ಪೋಡಿಯಂ ಫಿನಿಶ್ ಗಳಿಸಿದರು.

ಫೆಬ್ರವರಿಯಲ್ಲಿ ನಡೆದ ಉತ್ತರಾಖಂಡ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಚಿನ್ನ ಗೆಲ್ಲಲು ಈ ವರ್ಷದ ಆರಂಭದಲ್ಲಿ ನಿಗದಿಪಡಿಸಲಾಗಿದ್ದ 1:21: 23 ಸೆಕೆಂಡುಗಳ ವೈಯಕ್ತಿಕ ಅತ್ಯುತ್ತಮ ಸಮಯಕ್ಕಿಂತ ಸೆಬಾಸ್ಟಿಯನ್ ಅವರ ಸಮಯ ಕಡಿಮೆಯಾಗಿದೆ.

ಕ್ಷೇತ್ರದಲ್ಲಿರುವ ಮತ್ತೊಬ್ಬ ಭಾರತೀಯ ಅಮಿತ್ 1:22:14.30 ಸಮಯದೊಂದಿಗೆ ಐದನೇ ಸ್ಥಾನ ಪಡೆದರು.ಹಿಂದಿನ ಆವೃತ್ತಿಯಲ್ಲಿ ದೇಶ 27 ಪದಕಗಳನ್ನು ಗೆದ್ದ ಈ ಸ್ಪರ್ಧೆಗೆ ಭಾರತ 59 ಜನರ ತಂಡವನ್ನು ಕಳುಹಿಸಿದೆ.

ಯುವ ಮಾರ್ಗ



## ಹಿಂದುಳಿದ ವರ್ಗಗಳ ಇಲಾಖೆ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಮೇ.28–** 2025–26ನೇ ಸಾಲಿನ ಮಾನ್ವಿ ತಾಲೂಕಿನ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದೆ.

ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಬ್ಯಾಗವಾಟ್, ಬಾಗಲವಾಡ, ಬಲ್ಲಟಗಿ, ಹಾಲಾಪೂರ, ಮಾನ್ವಿ ಪೋತ್ನಾಳ ಮತ್ತು ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಮಾನ್ವಿ ವಸತಿ ನಿಲಯಗಳಿಗೆ ಪ್ರವೇಶ ಪಡೆಯಲು 5 ರಿಂದ 10ನೇ ತರಗತಿ ಓದುತ್ತಿರುವ ವಿದ್ಯಾರ್ಥಿಗಳು ತಮ್ಮ SATS ಐಡಿಯೊಂದಿಗೆ https://shp.karnataka.gov.in/ ಸಂದರ್ಶಿಸಿ ದಿನಾಂಕ:16–06–2025ರೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶವಿದ್ದು. ತಾಲೂಕ ಮಟ್ಟದಲ್ಲಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಮೇರಿಟ್ ಆಧಾರದಲ್ಲಿ ಕೌನ್ಸ್‌ಲಿಂಗ್ ಮೂಲಕ ಆಯ್ಕೆ ಮಾಡಲಾಗುವುದು ಹೆಚ್ಚಿನ ಮಾಹಿತಿಗಾಗಿ ತಾಲೂಕ ಹಿಂದುಳಿದ ವರ್ಗಗಳ ಕಚೇರಿ ಎಪಿಎಂಸಿ ಯಾರ್ಡ್ 2ನೇ ಗೇಟ್ ಸಿಂಧನೂರು ರಸ್ತೆ ಮಾನ್ವಿ ಮೊ;9008900527 ಸಂಪರ್ಕಿಸಲು ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಭಾಗಯ್ಯ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಮಳೆಯಲ್ಲಿ ಕಾರ್ಯನಿರತರಾದ ಕೂಲಿ ಕಾರ್ಮಿಕರು



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಮೇ.28–**ಅಮರಪುರ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಮುಕ್ಕನಾಳ ಗ್ರಾಮದ ಕೂಲಿ ಕಾರ್ಮಿಕರು ಮಳೆಯಲ್ಲಿ ಕೂಡ ತಮ್ಮ ಕಾರ್ಯವನ್ನು ನಿರ್ವಹಿಸುತ್ತಿರುವುದು ಕಂಡು ಬಂದಿತು.

ಈ ಸಂದರ್ಭದಲ್ಲಿ ಗ್ರಾಮಪಂಚಾಯತ್ ಅಭಿವೃದ್ಧಿ ಇಲಾಖೆ ಅಧಿಕಾರಿ ವೆಂಕಟೇಶ .ಊರಿನ ಮುಖಂಡರಾದ ನಾಗರಾಜ್ ನಾಡಗೌಡ,ಮಲ್ಲಿಕಾರ್ಜುನ ಮುದುಕಿಗೌಡ ಪ್ರಮರಾಜ ಹಾಗೂ ಕೂಲಿ ಕಾರ್ಮಿಕರು ಇದ್ದರು

## ವಿದ್ಯಾರ್ಥಿನಿಗೆ ಸನ್ಮಾನ



**ಯುವ ಮಾರ್ಗ ಸುದ್ದಿ**

**ಅರಕೇರಾ,ಮೇ.28–**2024–25ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅರಕೇರಾ ಪಟ್ಟಣದಲ್ಲಿನ ಸರಕಾರಿ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿ 625ಕ್ಕೆ 556 ಅಂಕ ಪಡೆದು ಶಾಲೆಗೆ ಅರಕೇರಾ ಪಟ್ಟಣಕ್ಕೆ ಕೀರ್ತಿ ತಂದುಕೊಟ್ಟ ಸಾಧನೆಗೈದ ವಿದ್ಯಾರ್ಥಿನಿ ಶಕೀಲಬಾನು ತಂದೆ ನಬೀಸಾಬ್ ರನ್ನು ಶಾಲೆಯ ಮುಖ್ಯೋಪಾಧ್ಯಾಯರಾದ ಮುರುಳಿಧರ ರಾವ್ ಕುಲಕರ್ಣಿಯವರು ಸನ್ಮಾನಿಸಿ ಗೌರವಿಸಿದರು.

ಸಂದರ್ಭದಲ್ಲಿ ಸರಕಾರಿ ಪದವಿಪೂರ್ವ ಕಾಲೇಜಿನ ಪ್ರಭಾರಿ ಪ್ರಾಂಶುಪಾಲ ಸಿದ್ದಯ್ಯ ಹವಾಲ್ದಾರ್, ಉಪನ್ಯಾಸಕಿ ಬುದ್ದಿವಂತಿ,ಮುಖ್ಯಗುರುಗಳಾದ ಮಂಜುನಾಥ, ಸಹ ಶಿಕ್ಷಕರಾದ ಹುಸೇನ್‌ಭಾಷ, ಚನ್ನಮಲ್ಲಪ್ಪ, ಚಂದಪ್ಪ, ಭಾಗ್ಯಶ್ರೀ ಉಪಸ್ಥಿತರಿದ್ದರು.

## ಡ್ಯಾನ್ಸ್ ಮಾಡುತ್ತಲೇ ಕುಸಿದು ಬಿದ್ದು ಯುವಕ ಸಾವು

**ಕಲಬುರಗಿ,ಮೇ.28–**ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಪ್ರಯುಕ್ತ ಹಮ್ಮಿಕೊಂಡಿದ್ದ ಮೆರವಣಿಗೆಯ ವೇಳೆ ಡ್ಯಾನ್ಸ್ ಮಾಡುತ್ತಿರುವಾಗಲೇ ಕುಸಿದು ಬಿದ್ದು ಯುವಕನೊಬ್ಬ ಮೃತಪಟ್ಟಿರುವ ಘಟನೆ ಹತಗುಂದಾ ಗ್ರಾಮದಲ್ಲಿ ನಡೆದಿದೆ.ಯಳವಂತಗಿ (ಕೆ) ಗ್ರಾಮದ ಸಚಿನ್ ತಂದೆ ಪರಮೇಶ್ವರ ಮಾನೆ ಮೃತಪಟ್ಟ ಯುವಕ.ಯಳವಂತಗಿ (ಕೆ) ಗ್ರಾಮದ ಸಚಿನ್ ತನ್ನ ಗೆಳೆಯರಾದ ಕಾರ್ತಿಕ ಮತ್ತು ಅಭಿಷೇಕ ಜೊತೆ ಪಕ್ಕದ ಊರಾದ ಹತಗುಂದಾ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಪ್ರಯುಕ್ತ ಆಯೋಜಿಸಿದ್ದ ಮೆರವಣಿಗೆಯಲ್ಲಿ ಪಾಲ್ಗೊಂಡು ಡ್ಯಾನ್ಸ್ ಮಾಡುತ್ತಲಿದ್ದರು. ಈ ವೇಳೆ ಸಚಿನ್ ಕುಸಿದು ಬಿದ್ದು ಮೃತಪಟ್ಟಿದ್ದಾನೆ ಎಂದು ತಿಳಿದುಬಂದಿದೆ.ಸಚಿನ್ ಅವರ ಸಹೋದರ ಬಭ್ರುವಾಹನ ಮಾನೆ ನೀಡಿದ ದೂರಿನ ಮೇರೆಗೆ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜಿಲ್ಲೆಯಲ್ಲಿ ಯೋಧರ ಮೇಲಿನ ದೌರ್ಜನ್ಯ : ಕಡಿವಾಣಕ್ಕೆ ಆಗ್ರಹ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಮೇ.28–** ದೇಶ ಕಾಯುವ ಯೋಧರ ಮೇಲಿನ ದೌರ್ಜನ್ಯ ಮುಂದುವರಿದಿದ್ದು, ಲಿಂಗಸೂರು ತಾಲೂಕಿನ ಕಸಬಾ ಲಿಂಗಸುಗೂರು ಗ್ರಾಮದ ಸಿ.ಆರ್.ಪಿ.ಎಫ್. ಎ.ಎಸ್.ಐ. ಚನ್ನಬಸ್ಸಪ್ಪ ತಂದೆ ಅಮರಪ್ಪ ಜೂಲಗುಡ್ಡ ಅವರ ಮೇಲೆ ಮಾರಣಾಂತಿಕ ಹಲ್ಲೆ ನಡೆದಿದ್ದು, ಹಲ್ಲೆ ನಡೆಸಿದ ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಮತ್ತು ಅವರನ್ನು ಗಡಿಪಾರು ಮಾಡುವಂತೆ ಕೇಂದ್ರೀಯ ಸಶಸ್ತ್ರ ಪಡೆಗಳ ಮಾಜಿ ಯೋಧರ ಕ್ಷೇಮಾಭಿವೃದ್ಧಿ ಸಂಘ ವತಿಯಿಂದ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಯೋಧ ಚನ್ನಬಸ್ಸಪ್ಪ ಅವರ ಅಕ್ಕ ದೇವಮ್ಮ ಗಂಡ ಪಂಪಣ್ಣ ಅವರ ಹೊಲದ ಬದುವಿನ ವಿಚಾರದಲ್ಲಿ ಬಾಜು ಜಮೀನಿನ ಮಾಲೀಕರೊಂದಿಗೆ ಜಗಳ ನಡೆಯುತ್ತಿತ್ತು. ಈ ಸಂದರ್ಭದಲ್ಲಿ ಚನ್ನಬಸ್ಸಪ್ಪ ಅವರು ಮಧ್ಯ ಪ್ರವೇಶಿಸಿ, ಜಗಳವಾಡುವುದು ಸರಿಯಲ್ಲ ಎಂದು ತಿಳಿಹೇಳಿದ್ದರು. ಇದರಿಂದ ಕೋಪಗೊಂಡ ಆರೋಪಿಗಳು, ಈ ದ್ವೇಷವನ್ನು ಮನಸ್ಸಿನಲ್ಲಿಟ್ಟುಕೊಂಡು ಯೋಧ ಚನ್ನಬಸ್ಸಪ್ಪ ಅವರು ಕಸಬಾ ಲಿಂಗಸೂರು ರಸ್ತೆಯಲ್ಲಿರುವ ವರದೇಂದ್ರ ಲೇಔಟ್‌ನಲ್ಲಿ ವಾಯು ವಿಹಾರಕ್ಕೆ ಹೋಗಿದ್ದಾಗ, ಆರೋಪಿಗಳಾದ ಅಮರೇಶ ಮತ್ತು ಮಂಜುನಾಥ ಇವರಿಬ್ಬರು ಯೋಧನ ಮೇಲೆ ಏಕಾಏಕಿ ಮಾರಣಾಂತಿಕ ಹಲ್ಲೆ ಮಾಡಿ ಗಾಯಗೊಳಿಸಿದ್ದಾರೆ.

ಸಂತ್ರಸ್ತ ಯೋಧನ ಕುಟುಂಬ ಮತ್ತು ಸಾರ್ವಜನಿಕರು ಈ ಘಟನೆಯನ್ನು ತೀವ್ರವಾಗಿ ಖಂಡಿಸಿಬಂಧಿತ ಆರೋಪಿಗಳನ್ನು ಕೂಡಲೇ ಗಡಿಪಾರು ಮಾಡಬೇಕು.ಆರೋಪಿಗಳ ಮೇಲೆ ಅನ್ವಯವಾಗುವ ಕಠಿಣ ಕಾನೂನು ಪ್ರಕರಣಗಳನ್ನು ದಾಖಲಿಸಬೇಕು. ಯೋಧನ ಅಕ್ಕನ ಜಮೀನನ್ನು ಹದ್ದುಬಸ್ತು ಮಾಡಿ, ಗಡಿ ಗುರುತಿಸಿ, ಆರೋಪಿಗಳು ಯೋಧನ ಅಕ್ಕನ ತಂಟೆಗೆ ಬರದಂತೆ ಕಟ್ಟುನಿಟ್ಟಿನ ಆದೇಶ ಹೊರಡಿಸಬೇಕು.ಯೋಧ ಚನ್ನಬಸ್ಸಪ್ಪ ಮತ್ತು ಅವರ ಕುಟುಂಬಕ್ಕೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಒತ್ತಾಯಿಸಿದರು.

## ಆಪರೇಷನ್ ಸಿಂಧೂರ್ ವಿಜಯೋತ್ಸವ : ಗಮನ ಸೆಳೆದ ತಿರಂಗಾ ಯಾತ್ರೆ



**ಔರಾದ,ಮೇ.28–**ಭಾರತೀಯ ಸೈನಿಕರ ಆಪರೇಷನ್ ಸಿಂಧೂರ ಯಶಸ್ವಿ ಕಾರ್ಯಾಚರಣೆಯ ನಿಮಿತ್ತ ಪಟ್ಟಣದಲ್ಲಿ ಬೃಹತ್ ತಿರಂಗಾ ಯಾತ್ರೆ ಸೋಮವಾರ ಅದ್ದೂರಿಯಾಗಿ ಜರುಗಿತು.

ಪಟ್ಟಣದ ಪ್ರವಾಸಿ ಮಂದಿರದ ಬಳಿ ಭಾರತಾಂಬೆಯ ಭಾವಚಿತ್ರಕ್ಕೆ ಶಾಸಕ ಪ್ರಭು ಚವ್ಹಾಣ ಅವರು ಪೂಜೆ ಸಲ್ಲಿಸಿ ತಿರಂಗಾಯಾತ್ರೆಗೆ ಚಾಲನೆ ನೀಡಿದರು. ಧ್ವಜಯಾತ್ರೆ ಸಾರ್ವಜನಿಕ ಆಸ್ಪತ್ರೆ, ಬಸವೇಶ್ವರ ವೃತ್ತ, ಬಸ್ ನಿಲ್ದಾಣದ ಮೂಲಕ ಎಪಿಎಂಸಿ ಕ್ರಾಸ್ ತಲುಪಿ ಕೊನೆಗೊಂಡಿತು. ಯಾತ್ರೆಯುದ್ದಕ್ಕೂ ಭಾರತೀಯ ಸೈನಿಕರ ಕಾರ್ಯಕ್ಕೆ ಜೈಘೋಷ ಕೂಗಲಾಯಿತು. ಸಾರ್ವಜನಿಕರು ಭಾರತದ ಧ್ವಜವನ್ನು ಕೈಯಲ್ಲಿ ಹಿಡಿದು ದೇಶಭಕ್ತಿಯ ಹಾಡುಗಳಿಗೆ ಹೆಜ್ಜೆ ಹಾಕಿ ಸಂಭ್ರಮಿಸಿದರು.

ವಿವಿಧ ಪಕ್ಷಗಳ ರಾಜಕೀಯ ಮುಖಂಡರು, ಸಂಘ ಸಂಸ್ಥೆಗಳ ಪ್ರಮುಖರು, ವ್ಯಾಪಾರಸ್ಥರು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ಅಧಿಕಾರಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು. ವಿವಿಧ ಮಠ–ಮಂದಿರಗಳ ಸ್ವಾಮೀಜಿಗಳು, ಮಹಿಳೆಯರು ಪಾಲ್ಗೊಂಡು ದೇಶದ ಸೈನಿಕರಿಗೆ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಭಾಲ್ಕಿ ಹಿರೇಮಠದ ಪೂಜ್ಯ ಬಸವಲಿಂಗ ಪಟ್ಟದ್ದೇವರು ಮಾತನಾಡಿ, ದೇಶ ಸುರಕ್ಷಿತವಾಗಿದ್ದರೆ ಧರ್ಮ ಸೇರಿದಂತೆ ಎಲ್ಲವೂ ಉಳಿಯುತ್ತದೆ. ಹಾಗಾಗಿ ನಮಗೆ ದೇಶವೇ ಮೊದಲ ಆದ್ಯತೆಯಾಗಬೇಕು. ತನು, ಮನದಲ್ಲಿ ದೇಶಭಕ್ತಿಯನ್ನು ಅಳವಡಿಸಿಕೊಳ್ಳಬೇಕು. ದೇಶಕ್ಕೆ ಆಪತ್ತು ಬಂದಾಗ ರಕ್ಷಣೆಗೆ ಎಲ್ಲರೂ ಸಿದ್ದರಿರಬೇಕು ಎಂದರು.

ಮಾಜಿ ಸೈನಿಕ ಹಣಮಂತ ಬುಟ್ಟೆ ಮಾತನಾಡಿ, ದೇಶ ಸುರಕ್ಷಿತವಾಗಿ ಇರಿಸುವಲ್ಲಿ ಸೈನಿಕರ ಪಾತ್ರ ಹೆಚ್ಚಿನ ಪ್ರಮಾಣದಲ್ಲಿರುತ್ತದೆ. ದೇಶದ ರಕ್ಷಣೆಯು ಜವಾಬ್ದಾರಿ ಕೇವಲ ಸೈನಿಕರದಲ್ಲ. ಎಲ್ಲ ನಾಗರಿಕರದ್ದಾಗಿದೆ. ಹಾಗಾಗಿ ಎಲ್ಲರಲ್ಲಿಯೂ ದೇಶಭಕ್ತಿ ಬೆಳೆಯಬೇಕು ಎಂದರು.

ಈ ಸಂದರ್ಭದಲ್ಲಿ ಪೂಜ್ಯ ಸಿದ್ಧಲಿಂಗ ಮಹಾಸ್ವಾಮಿ, ಶಿವಲಿಂಗ ಶಿವಾಚಾರ್ಯರು, ಶಂಭುಲಿಂಗ ಶಿವಾಚಾರ್ಯರು, ಚಂದ್ರಶೇಖರ ಶಿವಾಚಾರ್ಯರು, ಛಾಪಾ ಮಹಾರಾಜ, ನಿಜಲಿಂಗ ಶಿವಾಚಾರ್ಯರು, ಚನ್ನಮಲ ಶಿವಾಚಾರ್ಯರು, ಶಿವಾನಂದ ಶಿವಾಚಾರ್ಯರು, ಅಭಿನವ ಬಸವಲಿಂಗ ಶಿವಾಚಾರ್ಯರು, ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಮುಖಂಡರಾದ ಈಶ್ವರಸಿಂಗ ಠಾಕೂರ್, ಮಾರುತಿ ಚವ್ಹಾಣ, ವಸಂತ ಬಿರಾದಾರ, ಕಿರಣ ಪಾಟೀಲ, ಪೀರಪ್ಪ ಔರಾದೆ, ಅರಹಂತ ಸಾವಳೆ, ರಾಜಶೇಖರ ನಾಗಮೂರ್ತಿ, ಮಹೇಶ್ವರ ಸ್ವಾಮಿ, ನಿಲೇಶ ರಕ್ಷ್ಯಾಳೆ, ಬಾಬುರಾವ ಕಾರಬಾರಿ, ವಿಜಯಲಕ್ಷ್ಮಿ ಕೌಟಗೆ, ಗುರುನಾಥ ಜ್ಯಾಂತಿಕರ್, ಧೊಂಡಿಬಾ ನರೋಟೆ, ಬಸವರಾಜ ಪಾಟೀಲ, ಶಿವರಾಜ ಅಲ್ಮಾಜೆ, ಶ್ರೀಮಂತ ಪಾಟೀಲ, ವೀರು ದಿಗ್ವಾಲ್, ಡಾ.ವೈಜಿನಾಥ ಬುಟ್ಟೆ, ಶಿವಾನಂದ ವಡ್ಡೆ, ಶೇಷರಾವ ಕೋಳಿ, ಮಲ್ಲಪ್ಪ ದಾನಾ, ಬಸವರಾಜ ಹಳ್ಳೆ, ಅಶೋಕ ಶೆಂಬೆಳ್ಳೆ, ಯಾದುರಾವ ಸಗರ, ಮಾಜಿ ಸೈನಿಕರಾದ ನರಸಿಂಗ್ ಗಡದೆ, ನಾಗರಾಜ ಗಾಯಕವಾಡ, ಮಹಾದೇವ ಕೋಟೆ, ಶರಣಪ್ಪ ವಲ್ಲೆಪೂರೆ, ನಿವರ್ತಿ ಸಿಂಗೋಡೆ, ಅನೀಲಕುಮಾರ ಮೈಲಾರೆ, ರಾಚಪ್ಪ ಮಸ್ಕಲ್, ಕೇಶವ ಪಾಟೀಲ ಸೇರಿದಂತೆ ಇತರರಿದ್ದರು.

## ವಿಶೇಷ ದಾಖಲಾತಿ ಆಂದೋಲನ ಕಾರ್ಯಕ್ರಮ

**ಕೊಪ್ಪಳ, ಮೇ.28–** ರಾಜ್ಯಾದ್ಯಂತಹ ಮೇ.29 ರಂದು ಶಾಲೆಗಳು ಪ್ರಾರಂಭವಾಗುತ್ತಿದ್ದು,ಅದಕ್ಕೆ ಪೂರ್ವದಲ್ಲಿ ತಾಲೂಕಿನ ಬಹದ್ದೂರಬಂಡಿ ಗ್ರಾಮದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ವತಿಯಿಂದ ವಿಶೇಷ ದಾಖಲಾತಿ ಆಂದೋಲನ ನಡೆಸುವ ಮೂಲಕ ಮಕ್ಕಳ ಮನೆಗಳಿಗೆ ಭೇಟಿ ನೀಡುವ ಮೂಲಕ ಮಕ್ಕಳನ್ನು ಶಾಲೆಗೆ ದಾಖಲು ಮಾಡಿಕೊಳ್ಳಲಾಯಿತು.

ಈ ಸಮಯದಲ್ಲಿ ಮುಖ್ಯೋಪಾಧ್ಯಾಯರಾದ ಬೀರಪ್ಪ ಅಂಡಗಿ ಚಿಲವಾಡಗಿ ಅವರು ಮಾತನಾಡಿ, 6 ರಿಂದ 14 ವರ್ಷದ ಎಲ್ಲಾ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣ ವ್ಯವಸ್ಥೆ ಜಾರಿಗೆ ಮಾಡಲಾಗಿದೆ.ಸರ್ಕಾರಿ ಶಾಲೆಯಲ್ಲಿ ಅಭ್ಯಾಸ ಮಾಡುವ ಮಕ್ಕಳಿಗಾಗಿ ಉಚಿತ ಸಮವಸ್ತ್ರ,ಮಧ್ಯಾಹ್ನದ ಬಿಸಿಯೂಟ, ಪಠ್ಯಪುಸ್ತಕ ಸೇರಿದಂತೆ ಅನೇಕ ಸೌಲಭ್ಯಗಳನ್ನು ಸರ್ಕಾರ ನೀಡುತ್ತಿದ್ದು,ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲು ಮಾಡುವ ಮೂಲಕ ಎಲ್ಲಾ ಸೌಲಭ್ಯವನ್ನು ಪಡೆದುಕೊಳ್ಳಬೇಕು ಅಲ್ಲದೇ ನಮ್ಮ ಶಾಲೆಯಲ್ಲಿ ತಿಂಗಳಿಗೆ ಒಂದು ಬಾರಿ ಅರಿವಿನ ಅಂಗಳ ಕಾರ್ಯಕ್ರಮ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿಮಾನ ಪ್ರವಾಸ ಭಾಗ್ಯ ಸೇರಿದಂತೆ ಅನೇಕ ಸೌಲಭ್ಯಗಳನ್ನು ಒದಗಿಸಿ ಕೊಡಲಾತ್ತದೆ ಆದ್ದರಿಂದ ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ದಾಖಲು ಮಾಡಬೇಕು ಎಂದು ಹೇಳಿದರು.

## ಎಸ್ಸೆಸ್ಸೆಲ್ಸಿ ಪರೀಕ್ಷೆ: ಜೂನ್ 02ರವರೆಗೆ ನಿಷೇಧಾಜ್ಞೆ ಜಾರಿ

**ರಾಯಚೂರು,ಮೇ.28–** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ಪರೀಕ್ಷೆಯು ಜಿಲ್ಲೆಯಲ್ಲಿ ಜೂನ್ 2ರವರೆಗೆ ಒಟ್ಟು 51 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಕೇಂದ್ರದ ಸುತ್ತಲೂ ಕಲಂ 163ರ ಅನ್ವಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ.ಅವರು ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲು ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಹಾಗೂ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತಾ ಕ್ರಮವಾಗಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರ ಅನ್ವಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶ ವ್ಯಾಪ್ತಿಯ ಪರೀಕ್ಷೆ ಕೇಂದ್ರಗಳಿಗೆ ನಿಯೋಜಿಸಿದ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಹೊರತುಪಡಿಸಿ ಯಾರೂ ನಿಷೇಧಿತ ಪ್ರದೇಶವನ್ನು ಪ್ರವೇಶಿಸಕೂಡದು., ಸದರಿ ದಿನಗಳಂದು ಪರೀಕ್ಷೆ ಕೇಂದ್ರಗಳಿಗೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಮೊಬೈಲ್ ಫೋನ್‌ಗಳು, ಪಠ್ಯ ಪುಸ್ತಕಗಳು ಹಾಗೂ ಕ್ಯಾಲ್ಕುಲೇಟರ್‌ಗಳು ತರುವುದನ್ನು ನಿಷೇಧಿಸಿದೆ., ಪರೀಕ್ಷಾ ಕೇಂದ್ರಗಳ ಸುತ್ತಲಿನ ಎಲ್ಲಾ ಝರಾಕ್ಸ್ ಅಂಗಡಿಗಳನ್ನು ಹಾಗೂ ಸೈಬರ್ ಕೆಫೆಗಳನ್ನು ಪರೀಕ್ಷಾ ಸಮಯದಲ್ಲಿ ಕಡ್ಡಾಯ ಮುಚ್ಚಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪದ್ಮ ಶ್ರೇಣಿಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರು,ಮೇ.28–** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2026ನೇ ಸಾಲಿನ ಸಮಾಜದ ಯಾವುದೇ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಅರ್ಹ ವ್ಯಕ್ತಿಗಳಿಂದ ಪದ್ಮಶ್ರೇಣಿಯ ಪ್ರಶಸ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪದ್ಮಶ್ರೇಣಿಯ ಪ್ರಶಸ್ತಿಗಳಾದ ಪದ್ಮವಿಭೂಷಣ, ಪದ್ಮ ಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳನ್ನು ಗಣರಾಜ್ಯೋತ್ಸವದ ಹಿಂದಿನ ದಿನದಂದು ಕೇಂದ್ರ ಸರ್ಕಾರದಿಂದ ಪ್ರಕಟಿಸಲಾಗುವುದು. ಕ್ಷೇತ್ರಗಳಲ್ಲಿ ಶ್ರೇಷ್ಠತೆಗೊಳಿಸಿ ಅಸಾಧರಣ ಕೊಡುಗೆ ನೀಡಿರುವ ವ್ಯಕ್ತಿಗಳಿಗೆ ಪ್ರಶಸ್ತಿ ನೀಡಲಾಗುತ್ತದೆ.

**ಕಲೆ ಕ್ಷೇತ್ರ:** ಜನಪ್ರಿಯ ಕಲೆ, ಸಂಗೀತ, ಚಿತ್ರಕಲೆ, ವಾಸ್ತುಶಿಲ್ಪಾ, ಶಿಲ್ಪಕಲೆ, ಚಲನಚಿತ್ರ, ಛಾಯಾಗ್ರಹಣ ಇತರೆ., ಸಮಾಜ ಕಾರ್ಯ ಕ್ಷೇತ್ರ: ಸಮಾಜ ಸೇವೆ, ಧರ್ಮಾರ್ಥ ಸೇವೆ, ಸಮುದಾಯ ಯೋಜನೆಯ ನಿಮಿತ್ತದ ಕೊಡುಗೆ ಒಳಗೊಂಡಂತೆ., **ಸಾರ್ವಜನಿಕ ವ್ಯವಹಾರ:** ಕಾನೂನು ಮತ್ತು ಸಾರ್ವಜನಿಕ ಜೀವನ, ರಾಜಕೀಯ ಇತ್ಯಾದಿ., ವಿಜ್ಞಾನ, ತಾಂತ್ರಿಕ, ತಂತ್ರಜ್ಞಾನ ಮತ್ತು ಇತರೆ ಗೌರವಾನ್ವಿತ ವೃತ್ತಿ: ಬಾಹ್ಯಾಕಾಶ, ಇಂಜಿನೀಯರಿಂಗ್, ಅಣುವಿಜ್ಞಾನ, ಮಾಹಿತಿ ತಂತ್ರಜ್ಞಾನ, ಸಂಶೋದನೆ ಇತ್ಯಾದಿ., **ವ್ಯಾಪರ ಮತ್ತು ಕೈಗಾರಿಕೆ:** ಬ್ಯಾಂಕಿಂಗ್, ಆರ್ಥಿಕ ಚಟುವಟಿಕೆ, ಮ್ಯಾನೇಜಮೆಂಟ್, ಪ್ರವಾಸೋದ್ಯಮ ಅಭಿವೃದ್ಧಿ ಮತ್ತು ವಾಣಿಜ್ಯ ಒಳಗೊಂಡಂತೆ, ವೈದ್ಯಕೀಯ: ವೈದ್ಯಕೀಯ ಸಂಶೋಧನೆ, ಆಯುರ್ವೇದದಲ್ಲಿ ಕುಶಲತೆ, ಹೋಮಿಯೋಪತಿ, ಸಿದ್ದ, ಆಲೋಪತಿ, ನ್ಯಾಚುರೋಪತಿ ಇತ್ಯಾದಿ, ಸಾಹಿತ್ಯ ಮತ್ತು ಶಿಕ್ಷಣ: ಪತ್ರಿಕೋದ್ಯಮ, ಬೋಧನೆ, ಪುಸ್ತಕ ಬರೆಯುವಿಕೆ, ಸಾಹಿತ್ಯ, ವೈದ್ಯ, ಶಿಕ್ಷಣ, ಅಭಿವೃದ್ಧಿ, ಶಿಕ್ಷಣ ಸುಧಾರಣೆ ಇತ್ಯಾದಿ, ನಾಗರೀಕ ಸೇವೆ: ಆಡಳಿತದಲ್ಲಿ ಸರ್ಕಾರಿ ನೌಕರರು ಸಾಧಿಸಿರುವ ಶ್ರೇಷ್ಠತೆ, **ವ್ಯಾಪರ ಮತ್ತು ಕೈಗಾರಿಕೆ:** ಬ್ಯಾಂಕಿಂಗ್, ಆರ್ಥಿಕ ಚಟುವಟಿಕೆ, ಮ್ಯಾನೇಜಮೆಂಟ್, ಪ್ರವಾಸೋದ್ಯಮ ಅಭಿವೃದ್ಧಿ ಮತ್ತು ವಾಣಿಜ್ಯ ಒಳಗೊಂಡಂತೆ, **ನಾಗರೀಕ ಸೇವೆ:** ಆಡಳಿತದಲ್ಲಿ ಸರ್ಕಾರಿ ನೌಕರರು ಸಾಧಿಸಿರುವ ಶ್ರೇಷ್ಠತೆ, ಕ್ರೀಡೆ: ಕ್ರೀಡೆ, ಅಥ್ಲೆಟಿಕ್ಸ್, ಸಾಹಸ ಕ್ರೀಡೆ ಮತ್ತು ಯೋಗ, ಇತರ ಕ್ಷೇತ್ರಗಳು: ಮಾನವ ಹಕ್ಕುಗಳ ಸಂರಕ್ಷಣೆ, ಭಾರತದ ಸಂಸ್ಕೃತಿಯ ಪ್ರಚಾರ, ಪರಿಸರ ಸಂರಕ್ಷಣೆ ಮತ್ತು ವನ್ಯಮೃಗ ಸಂರಕ್ಷಣೆ ಕ್ಷೇತ್ರಗಳಲ್ಲಿ ನೀಡಬಹುದಾದ ಪದ್ಮ ಶ್ರೇಣಿಯ ಪ್ರಶಸ್ತಿಗಳಿಗೆ ಜೂನ್ 12ರ ಸಂಜೆ 5.30ಗಂಟೆಯೊಳಗಾಗಿ ನಮೂನೆಯಲ್ಲಿ ವಿವರವಾದ ವರದಿಯನ್ನು ಸಾಫ್ಟ್ ಪ್ರತಿಯನ್ನು ಇ–ಮೇಲ್ ವಿಳಾಸ: dkc.raichur@gmail.com ಮತ್ತು ಹಾರ್ಡ್ ಪ್ರತಿಯನ್ನು ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪಂಡಿತ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರ ರಾಯಚೂರು ಇವರಿಗೆ ಕಳುಹಿಸಿಕೊಡಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.31ರಂದು ಸಾರಿಗೆ ಅದಾಲತ್

**ರಾಯಚೂರು,ಮೇ.28–**ಇಲ್ಲಿನ ಸಾರಿಗೆ ಇಲಾಖೆಯ ಕಚೇರಿಯಲ್ಲಿ ಮೇ.31ರ ಬೆಳಿಗ್ಗೆ 12ಗಂಟೆಗೆ ಸಾರ್ವಜನಿಕರ ಕುಂದುಕೊರತೆ ಅಹವಾಲು ಸ್ವೀಕರಿಸಲು ಸಾರಿಗೆ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಪರಿಹಾರಿಸಿಕೊಳ್ಳಬಹುದಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**